ವಿಜಯಪುರ | ಸಂಪುಟ 02 | ಸಂಚಿಕೆ 213 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಅಕ್ಟೋಬರ್ 17, 2024

"ಬೆಂಗಳೂರಿನಲ್ಲಿ ಅನಿರೀಕ್ಷಿತವಾಗಿ ಸುರಿಯುತ್ತಿರುವ ಭಾರಿ ಮಳೆಯನ್ನು ನಿಭಾಯಿಸಲು ಸರ್ಕಾರ ಸಮರ್ಥವಾಗಿದೆ. ಪ್ರಕೃತಿಗೆ ಕಡಿವಾಣ ಹಾಕಲು ಸಾಧ್ಯವೇ? ಚಂಡಮಾರುತ ತಡೆಯಲು ಸಾಧ್ಯವೇ? ಇದನ್ನು ಅರ್ಥ ಮಾಡಿಕೊಳ್ಳದ ವಿರೋಧ ಪಕ್ಷಗಳು ರಾಜ್ಯದ ಮಾನ ಹರಾಜು ಹಾಕುವುದನ್ನು ನಿಲ್ಲಿಸಬೇಕು."



■ ಡಿ.ಕೆ.ಶಿವಕುಮಾರ್
ಉಪ ಮುಖ್ಯಮಂತ್ರಿ

# ವೈಭವದ ಲಕ್ಷ್ಮೀದೇವಿ ಜಾತ್ರೆ ಸಂಪನ್ನ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಪಟ್ಟಣದ 8ನೇ ವಾರ್ಡಿನ ತಡಪಟ್ಟಿ ನಿವೇಶನದಲ್ಲಿ ನೂತನವಾಗಿ ಪ್ರತಿಷ್ಠಾಪನಗೊಂಡ ಲಕ್ಷ್ಮೀದೇವಿಯ ಜಾತ್ರೆಯನ್ನು ಭಕ್ತಿ, ಭಾವದಿಂದ ಆಚರಿಸಲಾಯಿತು.

ಪಟ್ಟಣದಲ್ಲಿ ಬುಧವಾರ ಸಾಂಪ್ರದಾಯಿಕ ಲಕ್ಷ್ಮೀ ದೇವಿಯ ಜಾತ್ರೆಯ ಅಂಗವಾಗಿ ಬೆಳಿಗ್ಗೆಯಿಂದಲೇ ಶಾಸ್ತ್ರೋಕ್ತ ಪೂಜೆ ಆರಂಭಗೊಂಡಿತು. ನಂತರ ದೇವಿಯ ಮೆರವಣಿಗೆ ದೇವಸ್ಥಾನದಿಂದ ಆರಂಭಗೊಂಡು ಮೇನ್ ಬಜಾರ್, ತೇರು, ಗದ್ದಿಗೆಮಠ ರಸ್ತೆ ಮೂಲಕ ಮೂಲ ದೇವಸ್ಥಾನ ತಲುಪಿತು. ನಂತರ ಮಹಾಪ್ರಸಾದ ಜರುಗಿತು.

ಜಾತ್ರೆಯಲ್ಲಿ ಗುರುಪಾದ ಬುದ್ನಿ, ಗುರುರಾಜ್ ದೇಸಾಯಿ, ರಾಜಶೇಖರ ಅತನೂರ, ರಮೇಶ ಈಳಗೇರ, ಶ್ರೀನಿವಾಸ ಪಾಟೀಲ (ವರ್ಕಾನಳ್ಳಿ), ಸದಾನಂದ ಮಣೂರ ನೇತೃತ್ವ ವಹಿಸಿದ್ದರು.

ಶ್ರೀಶೈಲ ದೇಸಾಯಿ, ಅಭಿಜಿತ ತಡಪಟ್ಟಿ, ಸೀಮಾ ಬುದ್ನಿ, ಲತಾ ತಟಪಟ್ಟಿ ಸ್ಮಿತಾ ಈಳಗೇರ, ಪ್ರೀತಿ ಅತನೂರ, ಪ್ರೀತಿ ಪಾಟೀಲ, ಮಂಜುಳಾ ಮಣೂರ, ರೇಖಾ ಅತನೂರ, ಕಸ್ತೂರಿ ದೇಸಾಯಿ, ಸೇರಿದಂತೆ ಮಕ್ಕಳು ಇದ್ದರು.

# ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಗಡುವು

## ಮುಡಾ ಅಧ್ಯಕ್ಷ ಕೆ.ಮರಿಗೌಡ ತಮ್ಮ ಸ್ಥಾನಕ್ಕೆ ರಾಜೀನಾಮೆ । ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಭಾಗಿ? । ಲೋಕಾಯುಕ್ತ ಮತ್ತು ಜಾರಿ ನಿರ್ದೇಶನಾಲಯದ ತನಿಖೆ

■ ಉದಯರಶ್ಮಿ ದಿನಪತ್ರಿಕೆ

ನವದೆಹಲಿ: ಕೆ ಮರಿಗೌಡ ಅವರು ಮುಡಾ ಅಧ್ಯಕ್ಷ ಸ್ಥಾನದಿಂದ ಬುಧವಾರ ಕೆಳಗಿಳಿದ ಬೆನ್ನಲ್ಲೇ, ಭೂ ಹಗರಣದಲ್ಲಿ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂರ್ಯ ಮುಳುಗುದರೊಳಗೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಆಗ್ರಹಿಸಿದೆ.

ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಬಿಎಂ ಅವರಿಗೆ ನಿವೇಶನ ಹಂಚಿಕೆಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ(ಮುಡಾ) ಅಧ್ಯಕ್ಷ ಕೆ ಮರಿಗೌಡ ಅವರು ಇಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಮುಡಾ ಅಧ್ಯಕ್ಷರು ರಾಜೀನಾಮೆ ನೀಡಿದ್ದಾರೆ. ನಿಮ್ಮಲ್ಲಿ ಕಿಂಚಿತ್ತೂ ನೈತಿಕತೆ ಉಳಿದಿದ್ದರೆ ಕೂಡಲೇ ಅಧಿಕಾರದಿಂದ ಕೆಳಗಿಳಿಯಬೇಕು ಎಂದು ಸಿದ್ದರಾಮಯ್ಯ ಅವರಿಗೆ ಮನವಿ ಮಾಡುತ್ತೇನೆ. ಇಂದು ಸೂರ್ಯಾಸ್ತದೊಳಗೆ ರಾಜೀನಾಮೆ ನೀಡಿ ಎಂದು ಬಿಜೆಪಿ ರಾಷ್ಟ್ರೀಯ ವಕ್ತಾರ, ಸಂಸದ ಸಂಬಿತ್ ಪಾತ್ರಾ ಒತ್ತಾಯಿಸಿದ್ದಾರೆ.

ಮರಿಗೌಡ ಅವರ ರಾಜೀನಾಮೆ ಮತ್ತು ಸಿದ್ದರಾಮಯ್ಯ ಅವರ ಪತ್ನಿ ಅವರಿಗೆ ಮಂಜೂರು ಮಾಡಿದ ಮುಡಾ ನಿವೇಶನಗಳನ್ನು ಹಿಂದಿರುಗಿಸಿರುವುದು ಮುಖ್ಯಮಂತ್ರಿಗಳು 'ತಲೆಯಿಂದ ಕಾಲಿನವರೆಗೆ ಹಗರಣದಲ್ಲಿ ಮುಳುಗಿದ್ದಾರೆ' ಎಂಬುದನ್ನು ಸ್ಪಷ್ಟಪಡಿಸುತ್ತದೆ ಎಂದು ಬಿಜೆಪಿ ನಾಯಕ ಹೇಳಿದ್ದಾರೆ.





### ಮರಿಗೌಡ ರಾಜೀನಾಮೆ

ಇದಕ್ಕೂ ಮುನ್ನ ಮರಿಗೌಡ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿಗೆ ರಾಜೀನಾಮೆ ಸಲ್ಲಿಸಿದ್ದರು.
ಸಿಎಂ ನಿರ್ದೇಶನದ ಮೇರೆಗೆ ರಾಜೀನಾಮೆ ನೀಡಿದ್ದೇನೆ. ಆರೋಗ್ಯ ಸಮಸ್ಯೆ ಇದ್ದ ಕಾರಣ ರಾಜೀನಾಮೆ ನೀಡಿದ್ದೇನೆ. ನನ್ನ ಮೇಲೆ ಯಾವುದೇ ಒತ್ತಡವಿಲ್ಲ. ಆರೋಗ್ಯ ಸಮಸ್ಯೆ ಇದ್ದ ಕಾರಣ ರಾಜೀನಾಮೆ ನೀಡಿದ್ದೇನೆ ಎಂದು ಮರಿಗೌಡ ಅವರು ಬೆಂಗಳೂರಿನಲ್ಲಿ ಸುದ್ದಿಗಾರರಿಗೆ ತಿಳಿಸಿದ್ದರು.

### ಇಡಿ ಯಿಂದ ತನಿಖೆ

ಸಿದ್ದರಾಮಯ್ಯ ಅವರ ಪತ್ನಿಗೆ ಮುಡಾದಿಂದ 14 ನಿವೇಶನ ಹಂಚಿಕೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಲೋಕಾಯುಕ್ತ ಮತ್ತು ಜಾರಿ ನಿರ್ದೇಶನಾಲಯದ ತನಿಖೆ ನಡೆಯುತ್ತಿರುವುದನ್ನು ಇಲ್ಲಿ ಸ್ಮರಿಸಬಹುದು.

# ವಕ್ಫ ಬೋರ್ಡ್ ವಿರುದ್ಧ ನಡೆದ ಹೋರಾಟ ರಾಜಕೀಯ ಪ್ರೇರಿತ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದಲ್ಲಿ ನಿನ್ನೆ ನಡೆದ ವಕ್ಫ್ ಬೋರ್ಡ್ ವಿರುದ್ಧದ ಹೋರಾಟವು ರಾಜಕೀಯ ಪ್ರೇರಿತವಾಗಿದ್ದು, ಜನರನ್ನು ದಿಕ್ಕು ತಪ್ಪಿಸುವುದಾಗಿದೆ ಎಂದು ಕಾಂಗ್ರೆಸ್ ಮುಖಂಡರು ಗುಡುಗಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡರಾದ ಅಬ್ದುಲ್ ಹಮೀದ್ ಮುಷರಿಫ್ ಹಾಗೂ ಅಬ್ದುಲ್ ರಜಾಕ ಹೊರ್ತಿ ಅವರು, ಹತ್ತು ಸಾವಿರ ಎಕರೆ ಭೂಮಿ ಫ್ಲಾಗಿಂಗ್ ಮಾಡಿ ಸರ್ವೆ ಮಾಡಲು ನಮ್ಮ ವಕ್ಸ್ ಮಂತ್ರಿ ಜಮೀರ ಅಹಮದ್ ಖಾನ್ ರವರು ಹೇಳಿದ್ದಾರೆ. ಆದರೆ ಇದನ್ನೇ ಒಂದು ನೆಪವಾಗಿ ಇಟ್ಟುಕೊಂಡು ನಗರದ ಬಿಜೆಪಿ ಶಾಸಕ ಯತ್ನಾಳ್ ಇದನ್ನು ಸಾರ್ವಜನಿಕರಲ್ಲಿ ತಪ್ಪಾಗಿ ಬಿಂಬಿಸುತ್ತಿರುವುದು ಖಂಡನಿಯ. ಅವರ ಭಾಷೆ ನಡೆ-ನುಡಿ ನೋಡಿದರೆ ಸಮಾಜದಲ್ಲಿ ಅಶಾಂತಿ ಉಂಟು ಮಾಡುವ ಹುನ್ನಾರ ಮಾಡುತ್ತಿದ್ದಾರೆ ಎಂದೆನಿಸುತ್ತಿದೆ ಎಂದರು.

ವಕ್ಸ್ ಮಂತ್ರಿಗಳು ಜಿಲ್ಲಾಧಿಕಾರಿಗಳಿಗೆ ಆದೇಶ ಮಾಡಿರುವ ಸರ್ವೆ ವಿಷಯದಲ್ಲಿ ಶೇಕಡ 98% ರಷ್ಟು ನಮ್ಮ ಮುಸ್ಲಿಂ ಸಮಾಜದ 2 ಗುಂಪುಗಳ ಅಥವಾ ಇಬ್ಬರು ಮುತುವಲ್ಲಿಗಳಲ್ಲಿ ತಂಟೆ

ತಕರಾರುಗಳಿವೆ ಅವುಗಳನ್ನು ಕ್ಲಿಯರ್ ಮಾಡಬೇಕಾಗಿದೆ. ಈ ವಿಷಯವಾಗಿ ಸಚಿವರು ನಿರ್ದೇಶನ ನೀಡಿದ್ದಾರೆ. ಆದರೆ ಶಾಸಕ ಯತ್ನಾಳ್ ಇದರಲ್ಲಿ ಮುಸ್ಲಿಂ ಮಂತ್ರಿ ಎಂಬ ಒಂದೇ ಒಂದು ಕಾರಣಕ್ಕೆ ರಾಜಕಾರಣ ಮಾಡುತ್ತಿದ್ದಾರೆ. ಯಾವ ರೈತರ, ಬಡವರ ಭೂಮಿಯನ್ನು ಅನ್ಯಾಯದಿಂದ ತೆಗೆದುಕೊಳ್ಳಲಾಗುತ್ತಿಲ್ಲ, ಕೇವಲ ತಮ್ಮ ಪೂರ್ವಾಗ್ರಹಪೀಡಿತ ವಿಚಾರಗಳಿಂದ ಜನರಲ್ಲಿ ಗೊಂದಲಮಯ ವಾತಾವರಣ ಸೃಷ್ಟಿ ಮಾಡುತ್ತಿದ್ದಾರೆ. ದಾಖಲೆಗಳಿಲ್ಲದೆ ಯಾರ ಭೂಮಿಯನ್ನು ಯಾರೂ ತೆಗೆದುಕೊಳ್ಳಲು ಸಾಧ್ಯವಿಲ್ಲ. ಇವರು ಬಿಜೆಪಿಯ ಮುಖ್ಯಮಂತ್ರಿ ಅಭ್ಯರ್ಥಿ ಆಗಬೇಕೆಂಬ ಆಸೆಯಿಂದ ಇಂತಹ ಥರ್ಡ್ ಕ್ಲಾಸ್ ಕೆಲಸಗಳನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಫಯಾಜ್ ಕಲಾದಗಿ, ಆನಂದ ಜಾಧವ, ಮಹಾದೇವಿ ಗೋಕಾಕ, ಭಾರತಿ ಹೊಸಮನಿ ಉಪಸ್ಥಿತರಿದ್ದರು.

"ಬಿಜಾಪುರದಲ್ಲಿ ಅತಿ ಹೆಚ್ಚು ಸ್ಲಿಪ್ಪರ್ ಸೆಲ್ಗಳಿವೆ ಅಂತ ಚಕ್ರವರ್ತಿ ಸೂಲಿಬೆಲೆ ಬಹಿರಂಗವಾಗಿ ಹೇಳಿದ್ದಾರೆ. ಇವರೊಬ್ಬ ಸುಳ್ಳಿನ ಸರದಾರನಾಗಿದ್ದು, ಸುಳ್ಳು ಕಥೆ ಕಟ್ಟುವಲ್ಲಿ ಅವರು ನಿಸ್ಸೀಮರು. ಇವರಿಗೆ ತಕ್ಷಣ ಅರೆಸ್ಟ್ ಮಾಡಿ ಇವರನ್ನು ತನಿಖೆ ಮಾಡಬೇಕು. ಇವರ ಸ್ಲಿಪ್ಪರ್ ಸೆಲ್ ಗಳು ಎಲ್ಲೆಲ್ಲಿದ್ದಾರೆ? ಯಾರ್ಯಾರು ಇದ್ದಾರೆ? ಎಂಬುದನ್ನು ತಿಳಿದುಕೊಳ್ಳಬೇಕು. ಇವರು ನಮ್ಮ ಬಿಜಾಪುರಿನ ದಕ್ಷ ಪೋಲೀಸ್ ಅಧಿಕಾರಿಗಳ ಮತ್ತು ಇಂಟಲಿಜೆನ್ಸ್ ಡಿಪಾರ್ಟಮೆಂಟ್ ಬಗ್ಗೆ ಅನುಮಾನ ವ್ಯಕ್ತಪಡಿಸುವುದು ನೋಡಿದರೆ ಇವರು ಏನೋ ಕುತಂತ್ರ ನಡೆಸಿರುವುದು ತಿಳಿದು ಬರುತ್ತಿದೆ. ಕಾರಣ ಇವರನ್ನು ಅರೆಸ್ಟ್ ಮಾಡಬೇಕೆಂದು ಆಗ್ರಹಿಸುತ್ತೇನೆ."

■ ಅಬ್ದುಲ್ ಹಮೀದ್ ಮುಷರಿಫ್
ಕಾಂಗ್ರೆಸ್ ಮುಖಂಡರು, ವಿಜಯಪುರ

# ಅ.17ರಂದು ಸದ್ವಿಚಾರ ಗೋಷ್ಠಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಪಟ್ಟಣದ ಸಾರಂಗಮಠದಲ್ಲಿ ಅ.17ರಂದು ಸಾಯಂಕಾಲ 6:30ಗಂಟೆಗೆ ಚೆನ್ನವೀರ ಸ್ವಾಮೀಜಿ ಪ್ರತಿಷ್ಠಾನದ 335ನೆಯ ಸದ್ವಿಚಾರ ಗೋಷ್ಠಿ ಜರುಗಲಿದೆ.

ಸಾನಿಧ್ಯವನ್ನು ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ವಹಿಸಿಕೊಳ್ಳುವರು. ಬ್ಯಾಕೋಡ ಗ್ರಾಮದ ನಿವೃತ್ತ ಜಿಲ್ಲಾ ಸಾಂಖಿಕಾಧಿಕಾರಿ ಹಾಗೂ ಶರಣ ಸಾಹಿತ್ಯ ಪರಿಷತ್ ಮಾಜಿ ತಾಲೂಕಾಧ್ಯಕ್ಷ ಚನ್ನಪ್ಪ ಕತ್ತಿ ಅತಿಥಿ ಲಲಿತ ಸಹಸ್ರನಾಮ ಜಪದ ಮಹತ್ವ ಕುರಿತು ಉಪನ್ಯಾಸ ನೀಡಲಿದ್ದಾರೆ.

ಈ ವೇಳೆ ನೂತನವಾಗಿ ಅಖಿಲ ಭಾರತ ವೀರಶೈವ ಮಹಸಭಾ ತಾಲೂಕು ಘಟಕದ ನೂತನ ಪದಾಧಿಕಾರಿಗಳಿಗೆ ಸನ್ಮಾನಿಸಿ ಗೌರವಿಸಲಾಗುವುದು. ಮಲ್ಲಿಕಾರ್ಜುನ ಗಂಗಾಧರ ವಾರದ, ಕಮಲಾ ಮಲ್ಲಿಕಾರ್ಜುನ ಉಪ್ಪಿನ, ವಿಜಯಲಕ್ಷ್ಮಿ ಶಶಿಧರ ಮಠ ಹಾಗೂ ಬ್ಯಾಕೋಡ ಕತ್ತಿ ಪರಿವಾರದವರಿಂದ ದಾಸೋಹ ಸೇವೆ ನಡೆಯಲಿದೆ ಎಂದು ಚನ್ನವೀರ ಸ್ವಾಮೀಜಿ ಪ್ರತಿಷ್ಠಾನದ ಸಂಚಾಲಕರು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

# ಸಹಕಾರ ರತ್ನ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕನಾಟಕ ಸರ್ಕಾರವು ಶ್ರೇಷ್ಠ ಸಹಕಾರಿಗಳನ್ನು ಗುರುತಿಸಿ ಸಹಕಾರ ರತ್ನ ಪ್ರಶಸ್ತಿ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಹಕಾರಿ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸಿದ ಆಸಕ್ತರು ತಮ್ಮ ವ್ಯಯಕ್ತಿಕ ಪರಿಚಯ, ಸಹಕಾರಿ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವಿವರಗಳ ಅಗತ್ಯ ದಾಖಲೆಗಳನ್ನು ದಿನಾಂಕ 18-10-2024ರ ಬೆಳಿಗ್ಗೆ 11 ಗಂಟೆಯೊಳಗಾಗಿ ಸಹಕಾರ ಸಂಘಗಳ ಉಪ ನಿಬಂಧಕರು ವಿಜಯಪುರ ಕಚೇರಿಗೆ ಸಲ್ಲಿಸಬೇಕು ಎಂದು ಸಹಕಾರ ಸಂಘಗಳ ಉಪನಿಬಂಧಕರ ಪ್ರಕಟಣೆ ತಿಳಿಸಿದೆ.

## 'ವಚನ ದರ್ಶನ' ಕೃತಿ ಮತ್ತು 'ಶರಣರ ಶಕ್ತಿ' ಚಲನಚಿತ್ರ ನಿಷೇಧಿಸಲು ಆಗ್ರಹಿಸಿ ಬಸವ ಭಕ್ತರಿಂದ ಮನವಿ

# ಲಿಂಗಾಯತರನ್ನು, ಬಸವ ಭಕ್ತರನ್ನು ದಿಕ್ಕುತಪ್ಪಿಸುವ ಹುನ್ನಾರ : ಡಾ.ಪಟ್ಟಣ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಬಸವ ಭಕ್ತರ ಭಾವನೆಗೆ ಧಕ್ಕೆ ತರುವ 'ವಚನ ದರ್ಶನ' ಕೃತಿಯನ್ನು ಸರಕಾರ ಮುಟ್ಟುಗೋಲು ಹಾಕಬೇಕು ಹಾಗೂ ಶರಣ ಸಂಸ್ಕೃತಿಗೆ ಅಪಮಾನ ಮಾಡುವಂತಹ 'ಶರಣರ ಶಕ್ತಿ' ಚಲನಚಿತ್ರವನ್ನು ನಿಷೇಧಿಸಬೇಕೆಂದು ಆಗ್ರಹಿಸಿ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ ಮತ್ತು ಕಲ್ಬುರ್ಗಿ ಫೌಂಡೇಶನ್ ವತಿಯಿಂದ ಬುಧವಾರ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಡಾ.ಶಶಿಕಾಂತ ಪಟ್ಟಣ ಹಾಗೂ ಗಂಗಾಧರ ಸಾಲಕ್ಕಿ ಮಾತನಾಡಿ, ಶರಣರ ಅನುಭವ ಮಂಟಪ ಪರಿಕಲ್ಪನೆಯನ್ನು ಬುಡಮೇಲು ಮಾಡುವ ರೀತಿಯಲ್ಲಿ ಕೆಲ ಸಂಪ್ರದಾಯವಾದಿಗಳು ಈ 'ವಚನ ದರ್ಶನ' ಕೃತಿ ರಚಿಸಿದ್ದು, ಇದು ಲಿಂಗಾಯತ ಸಮಾಜ ಮತ್ತು ಬಸವ ಭಕ್ತರನ್ನು ದಿಕ್ಕು ತಪ್ಪಿಸುವ ಕೃತಿಯಾಗಿದೆ. ಇದರಿಂದ ಬಸವ ಭಕ್ತರಿಗೆ ನೋವಾಗಿದ್ದು, ಕಾರಣ ಶರಣರ ಅಭಿವ್ಯಕ್ತಿಗೆ ಕಳಂಕ ತರುವ ಈ ಕೃತಿಯನ್ನು ಕೂಡಲೇ ಸರಕಾರ ಮುಟ್ಟುಗೋಲು ಹಾಕಬೇಕು. ಅಲ್ಲದೇ 'ಶರಣರ ಶಕ್ತಿ' ಎಂಬ ಚಲನಚಿತ್ರವು ಶರಣರ ಚರಿತ್ರೆಗೆ ಮಸಿ ಬಳೆಯುವ ರೀತಿಯಲ್ಲಿ ಶರಣರ ಬದುಕನ್ನು ಕ್ರೌರ್ಯದಿಂದ, ಅನಾಗರಿಕ ಸಂಭಾಷಣೆಯಿಂದ ಚಿತ್ರಿಸಿ ಶರಣ ಸಂಸ್ಕೃತಿಗೆ ಅಪಮಾನ ಮಾಡಿದ್ದಾರೆ. ಈ ಚಲನಚಿತ್ರದ ಅನೇಕ ಸನ್ನಿವೇಶಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಅದನ್ನು ಕೂಡಲೇ ತೆಗೆಸಿ, 'ಶರಣರ ಶಕ್ತಿ' ಚಲನಚಿತ್ರ ಪ್ರದರ್ಶನಕ್ಕೆ ಸರಕಾರ ತಕ್ಷಣ ನಿಷೇಧ ಹೇರಬೇಕೆಂದು ಆಗ್ರಹಿಸಿದರು.

ಎಡಿಸಿ ಸೋಮಲಿಂಗ ಗೆಣ್ಣೂರ ಮನವಿ ಪತ್ರವನ್ನು ಸ್ವೀಕರಿಸಿದರು.

ಕಲ್ಬುರ್ಗಿ ಫೌಂಡೇಶನ್ ಅಧ್ಯಕ್ಷ ಶಿವಲಿಂಗಪ್ಪ ಕಲಬುರ್ಗಿ, ಮಾನವ ಬಂಧುತ್ವ ವೇದಿಕೆ ಅಧ್ಯಕ್ಷ ಪ್ರಭುಗೌಡ ಪಾಟೀಲ, ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭೆ ಜಿಲ್ಲಾ ಕಾರ್ಯದರ್ಶಿ ಸೋಮಶೇಖರ ಸಾಲಿ, ನಿವೃತ್ತ ಪ್ರೊ.ಬಿ.ಎಂ.ಬಿರಾದಾರ, ಹಿರಿಯ ಪತ್ರಕರ್ತ ಅನಿಲ ಹೊಸಮನಿ, ಪುಣೆಯ 'ಅಕ್ಕನ ಅರಿವು' ಬಳಗದ ಡಾ.ಸರಸ್ವತಿ ಪಾಟೀಲ, ಡಾ.ಶಾರದಾಮಣಿ ಹುಣಶ್ಯಾಳ, ಡಾ.ಮೀನಾಕ್ಷಿ ಪಾಟೀಲ, ಪ್ರೊ.ಶಾರದಮ್ಮ ಪಾಟೀಲ, ಗೌರಮ್ಮ ನಾಶಿ, ಬಸಮ್ಮ ಭರಶೆಟ್ಟಿ, ಶೈಲಾ ಮಣೂರ, ಸಂಗಪ್ಪ ಪಡನಾಡ, ಕರ್ನಲ್ ಸಂಗಪ್ಪ, ವಿ.ಎಪಾಟೀಲ್, ಶಕುಂತಲಾ ಚಿಂತಾಮಣಿ ಸೇರಿದಂತೆ ಅಧಿಕ ಸಂಖ್ಯೆಯ ಬಸವ ಭಕ್ತರು, ಅಭಿಮಾನಿಗಳು ಇದ್ದರು.



"ಸಮಾಜದಲ್ಲಿ ಗೊಂದಲ ಸೃಷ್ಟಿಸುವ ಹುನ್ನಾರದಿಂದ ಬೇರೆ ಬೇರೆ ನಗರಗಳಲ್ಲಿ " ವಚನ ದರ್ಶನ " ಕೃತಿ ಬಿಡುಗಡೆ ಮಾಡಿ ಪುಸ್ತಕ ಮಾರಾಟ ಮಾಡುತ್ತಿದ್ದಾರೆ. ಅಲ್ಲದೇ ಈಗ ಪುಸ್ತಕದ ವಿಮರ್ಶೆ ಗೆ ರೂ.10ಸಾವಿರದವರೆಗೆ ಬಹುಮಾನದ ಆಮಿಷವೊಡ್ಡಿ ಎಲ್ಲೆಡೆ ವಿವಾದಾತ್ಮಕ ಕೃತಿಯ ಮಾರಾಟಕ್ಕೆ ಮುಂದಾಗಿದ್ದು ಖಂಡನೀಯ. ಸರಕಾರ ಈ ಪುಸ್ತಕ ಮುಟ್ಟುಗೋಲು ಹಾಕದಿದ್ದರೆ ಕಾನೂನು ಹೋರಾಟಕ್ಕೆ ಮುಂದಾಗುವುದು ಅನಿವಾರ್ಯ. "

■ - ಡಾ.ಶಶಿಕಾಂತ ಪಟ್ಟಣ
ಅಧ್ಯಕ್ಷರು, ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ, ಪುಣೆ

# ಪ್ಲಾಸ್ಟಿಕ್ ನಿರ್ಮೂಲನೆಗಾಗಿ ಅರಿವು ಅಗತ್ಯ: ಡಾ.ಮಯೂರ

## ಜೆಎಸ್ಎಸ್ ಹಾಸ್ಪಿಟಲ್ಸ್ ವತಿಯಿಂದ ಪ್ಲಾಸ್ಟಿಕ್ ಮುಕ್ತ ಪರಿಸರ ಜಾಗೃತಿ ಜಾಥಾ ಹಾಗೂ ಯೋಗ ಶಿಬಿರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪ್ಲಾಸ್ಟಿಕ್ ಇಂದು ಮಾನವನನ್ನು ಸಾವಿನ ಮನೆ ಬಾಗಿಲಿನಲ್ಲಿ ನಿಲ್ಲಿಸುತ್ತಿದೆ. ನಿತ್ಯ ಜೀವನದಲ್ಲಿ ಪ್ಲಾಸ್ಟಿಕ್ ಬಳಕೆ ಇಲ್ಲದೆ ಬದುಕುವುದಕ್ಕೆ ಸಾಧ್ಯವೇ ಇಲ್ಲ ಎನ್ನುವ ಮಟ್ಟದಲ್ಲಿ ಇಂದು ಪ್ಲಾಸ್ಟಿಕ್ ಮಾನವನ ಜೀವನದೊಂದಿಗೆ ಬೆರೆತು ಹೋಗಿದ್ದು ಪ್ಲಾಸ್ಟಿಕ್ ನಮ್ಮನ್ನು ಕೊಲ್ಲುವ ಮೊದಲು ನಾವು ಪ್ಲಾಸ್ಟಿಕ್‌ನ್ನು ನಿರ್ಮೂಲ ಮಾಡಬೇಕಾಗಿದೆ. ಆ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದು ಜೆಎಸ್ಎಸ್ ಆಸ್ಪತ್ರೆಯ ನರರೋಗ ವಿಭಾಗದ ಮುಖ್ಯಸ್ಥ ಅಂತರಾಷ್ಟ್ರೀಯ ಖ್ಯಾತಿಯ ಯೋಗಿಕ್ ನ್ಯೂರೋ ಸರ್ಜನ್ ಡಾ.ಮಯೂರ್ ಕಾಕು ಹೇಳಿದರು.

ವಿಶ್ವ ಬೆನ್ನುಹುರಿ ದಿನದ ಅಂಗವಾಗಿ ನಗರದ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ವತಿಯಿಂದ ಆಯೋಜಿಸಲಾಗಿದ್ದ ಯೋಗಶಿಬಿರ ಹಾಗೂ ವಾಕೇಥಾನ್ ಉದ್ದೇಶಿಸಿ ಮಾತನಾಡಿದ ಅವರು; ಪ್ರತಿ ವರ್ಷವೂ ಜಾಗತಿಕವಾಗಿ 460 ಮಿಲಿಯನ್ ಮೆಟ್ರಿಕ್‌ಟನ್ ಪ್ಲಾಸ್ಟಿಕ್‌ನ್ನು ಉತ್ಪಾದಿಸಲಾಗುತ್ತಿದೆ. ಸುಮಾರು 20 ಮಿಲಿಯನ್ ಮೆಟ್ರಿಕ್‌ಟನ್ ಪ್ಲಾಸ್ಟಿಕ್ ತ್ಯಾಜ್ಯದಿಂದ ಪರಿಸರ ಪಾಲಿನ್ಯ ಉಂಟಾಗುತ್ತಿದೆ. 12 ಮಿಲಿಯನ್ ಮೆಟ್ರಿಕ್‌ಟನ್ ಪ್ಲಾಸ್ಟಿಕ್ ಕಡಲನ್ನು ಸೇರುತ್ತಿರುವುದರಿಂದ ಜಲಚರಗಳ ಜೀವಕ್ಕೆ ಸಂಚಕಾರ ಬರುತ್ತಿದೆ. ಒಟ್ಟು ತಯಾರಾಗಿರುವ ಪ್ಲಾಸ್ಟಿಕ್‌ನಲ್ಲಿ 9% ರಷ್ಟು ಮಾತ್ರ ಪುನರ್ ಬಳಕೆಯಾಗುತ್ತಿದ್ದು 79% ರಷ್ಟು ನೈಸರ್ಗಿಕ ವಿಕೋಪಗಳಲ್ಲಿ ಸೇರಿ ನಿಸರ್ಗವನ್ನು ಹಾಳು ಮಾಡುತ್ತಿದೆ. 60% ರಷ್ಟು ಮನೆಬಳಕೆಯ ಪ್ಲಾಸ್ಟಿಕ್ ಕಾಂಪೋಸ್ಟ ಗೊಬ್ಬರ ಮಾಡುವುದಕ್ಕೆ ಯೋಗ್ಯವಾಗಿದ್ದರು ಅದರ ನಿರ್ವಹಣೆ ಮಾಡುವುದಕ್ಕೆ ಸಾಧ್ಯವಾಗದ ಕಾರಣ ಪರಿಸರದ ಮೇಲೆ ವ್ಯಕ್ತಿರಿಕ್ತ ಪರಿಣಾಮ ಬೀರುತ್ತಿದೆ. ಬೀದಿಗೆ ಬಿಸಾಕುತ್ತಿರುವ ಪ್ಲಾಸ್ಟಿಕ್ ಸೇವನೆಯಿಂದ ಸಾವಿರಾರು ಗೋವುಗಳು ಪ್ರಾಣ ಬಿಡುತ್ತಿವೆ. ಅಲ್ಲದೆ ಪ್ಲಾಸ್ಟಿಕ್ ನಮ್ಮ ರಕ್ತದಲ್ಲಿ ಸೇರಿಕೊಂಡು ಕ್ಯಾನ್ಸರ್ ರೋಗಕ್ಕೂ ದಾರಿ ಮಾಡಿಕೊಡುತ್ತಲಿದೆ. ಹೀಗಾಗಿ ಪ್ಲಾಸ್ಟಿಕ್ ನಿರ್ಮೂಲನೆ ಮಾಡುವುದಕ್ಕೆ ನಾವೆಲ್ಲ ಕಂಕಣಬದ್ಧರಾಗಬೇಕು ಎಂದು ಹೇಳಿದರು.

ಇಂದು ಬೆನ್ನುಹುರಿ ಸಮಸ್ಯೆ ಸೇರಿದಂತೆ ನರ ರೋಗಗಳು ಬಹಳಷ್ಟು ಜನಗಳನ್ನು ಬಾಧಿಸುತ್ತಿವೆ. ಇದಕ್ಕೆ ಕೇವಲ ಶಸ್ತ್ರಚಿಕಿತ್ಸೆಯೇ ಮದ್ದು ಎಂದು ನಂಬಿಕೊಂಡಿದ್ದಾರೆ. ಆದರೆ ಯೋಗ ಚಿಕಿತ್ಸೆಯ ಮೂಲಕ ಆಪರೇಷನ್ ಇಲ್ಲದೇ ಸಮಸ್ಯೆಯನ್ನು ವಾಸಿ ಮಾಡಬಹುದಾಗಿದ್ದು ಯೋಗಶಕ್ತಿಯಿಂದ ರೋಗನಿರೋಧಕ ಶಕ್ತಿಯನ್ನು ಸಹ ಹೆಚ್ಚಿಸಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ. ಇನ್ನುಮುಂದೆ ಜೆ-ಎಸ್ಎಸ್ ಆಸ್ಪತ್ರೆಯಲ್ಲಿ ಯೋಗಿಕ್ ನ್ಯೂರೋ ಚಿಕಿತ್ಸೆ ಲಭ್ಯವಿರಲಿದ್ದು ಅವಶ್ಯಕತೆ ಉಳ್ಳವರು ಅದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು. ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಜ್ಞಾನಯೋಗಾಶ್ರಮದ ಬಸವಲಿಂಗ ಸ್ವಾಮೀಗಳು ಸಿದ್ಧೇಶ್ವರ ಶ್ರೀಗಳ ಕನಸಾದ ಸ್ವಚ್ಚ ಹಾಗೂ ಸದೃಢ ವಿಜಯಪುರವನ್ನು ನಿರ್ಮಾಣ ಮಾಡುವಲ್ಲಿ ನಗರದ ಶಾಸಕ ಬಸನಗೌಡ ರಾ ಪಾಟೀಲ ಯತ್ನಾಳರ ಕೊಡುಗೆ ಅಪಾರವಾಗಿದ್ದು ಮುಂದಿನ ದಿನಗಳಲ್ಲಿ ಅವರಿಂದ ಇನ್ನೂ ಹೆಚ್ಚಿನ ಸೇವೆ ಒದಗಿ ಬರಲಿ ಎಂದರು.



ನಗರದ ಶಾಸಕ ಬಸನಗೌಡ ರಾ ಪಾಟೀಲ್ ಯತ್ನಾಳ ಅವರು ಬೆಳಿಗ್ಗೆ ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಪ್ಲಾಸ್ಟಿಕ್ ಮುಕ್ತ ವಿಜಯಪುರ ನಿರ್ಮಾಣದ ಜಾಗೃತಿಗಾಗಿ ವಾಕೇಥಾನ್‌ಗೆ ಚಾಲನೆ ನೀಡಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.
ರನ್ನ ಬೆಳಗಲಿಯ ಯೋಗ ಗುರು ಸದಾಶಿವಯ್ಯನವರು, ಸಿದ್ಧೇಶ್ವರ ಸಂಸ್ಥೆಯ ಚೇರಮನ್ ಬಸಯ್ಯ ಹಿರೇಮಠ, ಉಪಾಧ್ಯಕ್ಷ ಸಂಗು ಸಜ್ಜನ್, ನಿರ್ದೇಶಕ ರಾಮನಗೌಡ ಬ. ಪಾಟೀಲ್ ಯತ್ನಾಳ, ಜೆಎಸ್ಎಸ್ ಆಸ್ಪತ್ರೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಶರಣ ಮಳಖೇಡ್ಕರ ಸೇರಿದಂತೆ ಅನೇಕ ಕರಿಯರ್ ಅಕಾಡೆಮಿ ಹಾಗೂ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಹಾಗೂ ಐಆರ್‌ಬಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕೆನಡಾ ಆರೋಪ ಅತ್ಯಂತ ಗಂಭೀರ: ನಿಜ್ಜರ್ ಹತ್ಯೆ ತನಿಖೆಯಲ್ಲಿ ಸಹಕಾರ ನೀಡಿ, ಭಾರತಕ್ಕೆ ಅಮೆರಿಕದ ಸೂಚನೆ!



ವಾಷಿಂಗ್ಟನ್: ಕೆನಡಾದ ಆರೋಪ 'ಅತ್ಯಂತ ಗಂಭೀರ' ವಾಗಿದೆ ಎಂದಿರುವ ಅಮೆರಿಕ, ಸಿಖ್ ಪ್ರತ್ಯೇಕತಾವಾದಿ ನಾಯಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಗೆ ಸಂಬಂಧಿಸಿದ ತನಿಖೆಗೆ 'ಸಹಕಾರ' ನೀಡುವಂತೆ ಭಾರತಕ್ಕೆ ಸೂಚಿಸಿದೆ.

ಕೆನಡಾದಲ್ಲಿ ನಿಜ್ಜರ್ ಹತ್ಯೆಯಲ್ಲಿ ಭಾರತೀಯ ಸರ್ಕಾರಿ ಏಜೆಂಟರು ಭಾಗಿಯಾಗಿದ್ದಾರೆ ಎಂದು ಪ್ರಧಾನಿ ಜಸ್ಟಿನ್ ಟ್ರುಡೊ ಆರೋಪಿಸಿದ ನಂತರ ಭಾರತ ಮತ್ತು ಕೆನಡಾ ನಡುವೆ ರಾಜತಾಂತ್ರಿಕ ಬಿಕ್ಕಟ್ಟು ಎದುರಾಗಿದೆ.ಕೆನಡಾದ ಆರೋಪಗಳನ್ನು ಭಾರತ ತಳ್ಳಿಹಾಕಿದ್ದು, ಇದು 'ಅಸಂಬದ್ಧ' ಮತ್ತು 'ರಾಜಕೀಯ ಪ್ರೇರಿತ' ಎಂದು ಬಣ್ಣಿಸಿದೆ.

ಈ ಕುರಿತು ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಮೆರಿಕದ ವಿದೇಶಾಂಗ ಇಲಾಖೆಯ ವಕ್ತಾರ ಮ್ಯಾಥ್ಯೂ ಮಿಲ್ಲರ್, ಕೆನಡಾದ ಆರೋಪಗಳು ಅತ್ಯಂತ ಗಂಭೀರವಾಗಿದೆ ಮತ್ತು ಅವುಗಳನ್ನು ಗಂಭೀರವಾಗಿ ಪರಿಗಣಿಸಬೇಕಾಗಿದೆ ಎಂದು ಸ್ಪಷ್ಟಪಡಿಸಿದ್ದೇವೆ. ಭಾರತ ಕೆನಡಾದ ತನಿಖೆಗೆ ಸಹಕರಿಸುವುದನ್ನು ನೋಡಲು ನಾವು ಬಯಸುತ್ತೇವೆ. ಆದರೆ, ಭಾರತ ಪರ್ಯಾಯ ಮಾರ್ಗವನ್ನು ಆಯ್ಕೆ ಮಾಡಿಕೊಂಡಿದೆ ಎಂದರು.

ಉಭಯ ದೇಶಗಳ ನಡುವಿನ ಸಹಕಾರದ ಅಗತ್ಯವನ್ನು ಒತ್ತಿ ಹೇಳಿದ ಮಿಲ್ಲರ್, ಎರಡೂ ದೇಶಗಳು ಬಹಿರಂಗವಾಗಿ ನೀಡಿರುವ ಹೇಳಿಕೆ ಮೀರಿ ನಾವು ಯಾವುದೇ ಹೇಳಿಕೆ ನೀಡುವುದಿಲ್ಲ. ಸಹಕರಿಸಲು ಭಾರತವನ್ನು ಒತ್ತಾಯಿಸಿದ್ದೇವೆ ಮತ್ತು ಹಾಗೆ ಮಾಡಲು ಒತ್ತಾಯಿಸುತ್ತೇವೆ ಎಂದು ಹೇಳಿದರು. ಆದಾಗ್ಯೂ, ಗಖ-ಭಾರತದ ದ್ವಿಪಕ್ಷೀಯ ಸಂಬಂಧ ದೃಢವಾಗಿ ಉಳಿಯುತ್ತದೆ ಎಂದು ಮಿಲ್ಲರ್ ಭರವಸೆ ನೀಡಿದರು.

ಭಾರತೀಯ ರಾಯಭಾರಿ ವಿರುದ್ಧ ಅಸಂಬದ್ಧ ಆರೋಪ: ಕೆನಡಾ ಹೈಕಮಿಷನರ್ ಕರೆಸಿ ಕುಟುಕಿದ ಒಇಂ!

"ಭಾರತ ಅಮೆರಿಕದ ನಂಬಲಾಗದಷ್ಟು ಬಲವಾದ ಪಾಲುದಾರನಾಗಿ ಮುಂದುವರೆದಿದೆ. ಇಂಡೋ ಫೆಸಿಫಿಕ್ ಮುಕ್ತ ಸೇರಿದಂತೆ ಹಲವಾರು ವಿಷಯಗಳಲ್ಲಿ ಅವರೊಂದಿಗೆ ಕೆಲಸ ಮಾಡಿದ್ದೇವೆ. ನಾವು ಕಾಳಜಿ, ಉತ್ತಮ ಸಂಬಂಧ ಹೊಂದಿರುವಾಗ ಅವರಿಗೆ ಸಂಬಂಧಿಸಿದ ಕಾಳಜಿ ಕುರಿತು ಮುತುವರ್ಜಿ ವಹಿಸಬಹುದು. ಆ ಕೆಲಸವನ್ನು ಮಾಡುತ್ತಿದ್ದೇವೆ ಎಂದು ಅವರು ಹೇಳಿದರು.

# ಭಾರತದ ಮೇಲೆ ನಿರ್ಬಂಧ ಹೇರುವ ಬೆದರಿಕೆ ಹಾಕಿದ ಕೆನಡಾ ವಿದೇಶಾಂಗ ಸಚಿವೆ

ನವದೆಹಲಿ: ಕೆನಡಾದ ವಿದೇಶಾಂಗ ಸಚಿವೆ ಮೆಲಾನಿ ಜೋಲಿ ಅವರು ಭಾರತದ ಮೇಲೆ ನಿರ್ಬಂಧಗಳನ್ನು ಹೇರುವುದಾಗಿ ಪರೋಕ್ಷವಾಗಿ ಬೆದರಿಕೆ ಹಾಕಿದ್ದಾರೆ. ಇದಕ್ಕೆ ಭಾರತೀಯ ಅಧಿಕಾರಿಗಳು ಕೆನಡಾ ಸರ್ಕಾರವು ಭಾರತದೊಂದಿಗಿನ ರಾಜತಾಂತ್ರಿಕ ಸಂಬಂಧಗಳನ್ನು ಹದಗೆಡಿಸುವಲ್ಲಿ ಮುಂದಿನ ಹಂತವಾಗಿ ನಿರ್ಬಂಧಗಳನ್ನು ವಿಧಿಸುವ ಯಾವುದೇ ಕ್ರಮವನ್ನು ತೆಗೆದುಕೊಂಡರೆ, ಅದು ಎರಡು ದೇಶಗಳ ಅಸ್ತಿತ್ವದಲ್ಲಿರುವ ಆರ್ಥಿಕ ಸಂಬಂಧಗಳ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ಎಂದು ಹೇಳಿದರು.

ನಿರ್ಬಂಧದಿಂದಾಗಿ ಕೆನಡಾದ ಕಂಪನಿಗಳಿಗೆ ಭಾರತದಲ್ಲಿ ವ್ಯಾಪಾರ ಮಾಡುವುದು ಕಷ್ಟವಾಗುತ್ತದೆ ಮತ್ತು ಭಾರತದಲ್ಲಿ ಹೂಡಿಕೆ ಮಾಡುವ ಕೆನಡಾದ ಪಿಂಚಣಿ ನಿಧಿಗಳು ತಮ್ಮ ಹೂಡಿಕೆಗಳನ್ನು ಇಲ್ಲಿಂದ ಹಿಂತೆಗೆದುಕೊಳ್ಳಬೇಕಾಗಬಹುದು. ಕಳೆದ ವರ್ಷದಿಂದ ಉಭಯ ದೇಶಗಳ ನಡುವಿನ ರಾಜಕೀಯ ಸಂಬಂಧಗಳು ಹದಗೆಟ್ಟಿದ್ದರೂ, ದ್ವಿಪಕ್ಷೀಯ ವ್ಯಾಪಾರದ ಮೇಲೆ ಯಾವುದೇ ವ್ಯತಿರಿಕ್ತ ಪರಿಣಾಮ ಉಂಟಾಗಿಲ್ಲ. ಆದಾಗ್ಯೂ, ಮುಕ್ತ ವ್ಯಾಪಾರ ಒಪ್ಪಂದಕ್ಕೆ (ಎಫ್‌ಟಿಎ) ಸಂಬಂಧಿಸಿದಂತೆ ನಡೆಯುತ್ತಿರುವ ಮಾತುಕತೆಗಳನ್ನು ಖಂಡಿತವಾಗಿಯೂ ಮುಂದೂಡಲಾಗಿದೆ.



ಖಲಿಸ್ತಾನಿ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಗೆ ಸಂಬಂಧಿಸಿದಂತೆ ಪ್ರಧಾನಿ ಜಸ್ಟಿನ್ ಟ್ರುಡೊ ಮತ್ತು ವಿದೇಶಾಂಗ ಸಚಿವೆ ಜೋಲಿ ಮಂಗಳವಾರ ಪತ್ರಿಕಾಗೋಷ್ಠಿ ನಡೆಸಿದರು. ಇದರಲ್ಲಿ ಭಾರತದ ಮೇಲೂ ನಿಷೇಧ ಹೇರಬಹುದೇ ಎಂದು ಜೋಲಿ ಅವರನ್ನು ಕೇಳಲಾಯಿತು. ಇಂದು ನಾವು ದೊಡ್ಡ ಹೆಜ್ಜೆ ಇಟ್ಟಿದ್ದೇವೆ ಎಂಬುದು ಅವರ ಉತ್ತರವಾಗಿತ್ತು. ನಾವು ಹೊಂದಿದ್ದ ಆಯ್ಕೆಗಳಲ್ಲಿ, ರಾಜತಾಂತ್ರಿಕರನ್ನು ಹೊರಹಾಕುವುದು ಯಾವುದೇ ದೇಶದ ವಿರುದ್ಧ ತೆಗೆದುಕೊಳ್ಳಬಹುದಾದ ಕಠಿಣ ಹೆಜ್ಜೆಯಾಗಿದೆ ಎಂದರು.

ವಿದೇಶಾಂಗ ಸಚಿವ ಜೋಲಿಗೂ ಮೊದಲು, ಟ್ರೂಡೊ ಸರ್ಕಾರದ ಮಾಜಿ ಮಿತ್ರ ನ್ಯೂ ಡೆಮಾಕ್ರಟಿಕ್ ಪಕ್ಷದ ಮುಖ್ಯಸ್ಥ ಜಗ್ಮೀತ್ ಸಿಂಗ್ ಕೂಡ ಭಾರತದ ಮೇಲೆ ನಿರ್ಬಂಧಗಳನ್ನು ಒತ್ತಾಯಿಸಿದ್ದರು. ಕೆನಡಾದಲ್ಲಿ ಆರ್‌ಎಸ್‌ಎಸ್ ಅನ್ನು ನಿಷೇಧಿಸುವ ಬಗ್ಗೆಯೂ ಅವರು ಮಾತನಾಡಿದ್ದಾರೆ. ಕೆನಡಾದ ವಿದೇಶಾಂಗ ಸಚಿವರ ಮೇಲಿನ ಬೆದರಿಕೆಗೆ ಭಾರತೀಯ ಅಧಿಕಾರಿಗಳು ಪ್ರತಿಕ್ರಿಯಿಸಿಲ್ಲ, ಆದರೆ ಇದು ಸಂಭವಿಸಿದಲ್ಲಿ ಅದು ಉಭಯ ದೇಶಗಳ ನಡುವಿನ ಆರ್ಥಿಕ ಸಂಬಂಧಗಳ ಮೇಲೆ ಭಾರಿ ಪರಿಣಾಮ ಬೀರಬಹುದು.

ಸರ್ಕಾರದ ಅಂಕಿಅಂಶಗಳ ಪ್ರಕಾರ, 2019 ಮತ್ತು 2023ರ ನಡುವೆ, ಕೆನಡಾದ ಕಂಪನಿಗಳು ಭಾರತದಲ್ಲಿ ಒಟ್ಟು 11.9 ಬಿಲಿಯನ್ ಡಾಲರ್ ಹೂಡಿಕೆ ಮಾಡಿವೆ. ಇತ್ತೀಚಿನ ವರ್ಷಗಳಲ್ಲಿ, ಕೆನಡಾದ ಪಿಂಚಣಿ ನಿಧಿಗಳು ಭಾರತದ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಗಮನಾರ್ಹವಾಗಿ ಹೂಡಿಕೆ ಮಾಡಲು ಪ್ರಾರಂಭಿಸಿವೆ. ಈ ಎಲ್ಲಾ ಹೂಡಿಕೆಗಳ ಯಾವುದೇ ಸಂಭಾವ್ಯ ನಿರ್ಬಂಧಗಳಿಂದ ಪ್ರಭಾವ ಬೀರಬಹುದು. ಆದರೆ ಪ್ರಸ್ತುತ ವಿವಾದವು ಮತ್ತಷ್ಟು ಉಲ್ಬಣಗೊಂಡರೆ, ಆರ್ಥಿಕ ಪರಿಣಾಮವು ಎರಡೂ ಕಡೆಗಳಲ್ಲಿ ಕಂಡುಬರುತ್ತದೆ.

ಅನೇಕ ಆರ್ಥಿಕ ಸವಾಲುಗಳನ್ನು ಎದುರಿಸುತ್ತಿರುವ ಕೆನಡಾದ ಆರ್ಥಿಕತೆಗೆ ಭಾರತದ ಮೇಲೆ ನಿರ್ಬಂಧಗಳನ್ನು ವಿಧಿಸುವ ಕ್ರಮವು ಪ್ರತಿಕೂಲವಾಗಬಹುದು ಎಂದು ತಜ್ಞರು ಹೇಳುತ್ತಾರೆ. ಇದರಿಂದ ಉಭಯ ದೇಶಗಳ ನಡುವೆ ವ್ಯಾಪಾರ ಸಮರ ಆರಂಭವಾಗಬಹುದು. ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಲ್ಲಿ ಕೆನಡಾ ಹೂಡಿಕೆಯಿಂದ ವಂಚಿತವಾಗಬಹುದು. ನಿಷೇಧದ ಸ್ವರೂಪವು ಸಮಗ್ರವಾಗಿದ್ದರೆ, ಇದು ಭಾರತ ಮತ್ತು ಕೆನಡಾ ಎರಡರಲ್ಲೂ ವ್ಯಾಪಾರ ಮಾಡುವ ಕಂಪನಿಗಳ ಮೇಲೂ ಪರಿಣಾಮ ಬೀರಬಹುದು. ಇದು ಕೆನಡಾದ ಆರ್ಥಿಕ ಸವಾಲುಗಳನ್ನು ಹೆಚ್ಚಿಸುತ್ತದೆ ಮತ್ತು ಟ್ರೂಡೊ ಸರ್ಕಾರಕ್ಕೆ ಬಿಕ್ಕಟ್ಟನ್ನು ಸೃಷ್ಟಿಸುತ್ತದೆ.

# ಅಬು ಸಲೇಂ ಹಸ್ತಾಂತರದ ರೂವಾರಿ, ಸಿಬಿಐ ಮಾಜಿ ಮುಖ್ಯಸ್ಥ ಪಿಸಿ ಶರ್ಮಾ ನಿಧನ

ನವದೆಹಲಿ: ಮುಂಬೈ ಬಾಂಬ್ ಸ್ಫೋಟದ ಆರೋಪಿ ಅಬು ಸಲೇಂನನ್ನು ಪೋರ್ಚುಗಲ್‌ನಿಂದ ಭಾರತಕ್ಕೆ ಹಸ್ತಾಂತರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಸಿಬಿಐ ಮಾಜಿ ನಿರ್ದೇಶಕ ಪಿ ಸಿ ಶರ್ಮಾ ಮಂಗಳವಾರ ನಿಧನರಾಗಿದ್ದಾರೆ. ಅವರಿಗೆ 82 ವರ್ಷ ವಯಸ್ಸಾಗಿತ್ತು.

ಮೂರು ದಿನಗಳ ಹಿಂದೆ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ಮಾಜಿ ಐಪಿಎಸ್ ಅಧಿಕಾರಿ ರಾತ್ರಿ 7.45ಕ್ಕೆ ಕೊನೆಯುಸಿರೆಳೆದಿದ್ದಾರೆ. ಇಂದು ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಸದಸ್ಯರು ತಿಳಿಸಿದ್ದಾರೆ.

1966ರ ಬ್ಯಾಚ್‌ನ ಅಸ್ಸಾಂ ಕೇಡರ್‌ನ ಐಪಿಎಸ್ ಅಧಿಕಾರಿಯಾಗಿದ್ದ ಶರ್ಮಾ ಅವರು ವೈಟ್ ಕಾಲರ್ ಅಪರಾಧ ಹೆಚ್ಚುತ್ತಿದ್ದ ವೇಳೆ ಏಪ್ರಿಲ್ 30, 2001 ರಂದು ಸಿಬಿಐ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡಿದ್ದರು. ಅವರು ಡಿಸೆಂಬರ್ 6, 2003 ರವರೆಗೆ ತನಿಖಾ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿದ್ದರು.


ಅಸ್ಸಾಂನೊಂದಿಗಿನ ಅವರ ಸಂಪರ್ಕದ ಸಂಕೇತವಾಗಿ ಅವರು ಪ್ರತಿಯೊಂದು ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಬಿದಿರಿನ ಟೋಪಿ ಧರಿಸುವುದರೊಂದಿಗೆ ಗುರುತಿಸಲ್ಪಟ್ಟಿದ್ದರು. ಶರ್ಮಾ ಕಾನೂನು ಜಾರಿಯಲ್ಲಿ ವಿಶಿಷ್ಟವಾದ ವೃತ್ತಿಜೀವನ ಹೊಂದಿದ್ದ ಶರ್ಮಾ, ಸಿಬಿಐಗೆ ಸೇರುವ ಮುನ್ನಾ 1978 ರಲ್ಲಿ ಪೊಲೀಸ್ ವರಿಷ್ಠಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು.

# ಹೆಚ್ಚು ಅಪಘಾತದ 20 ಹೈವೇಗಳಲ್ಲಿ ಸುರಕ್ಷತಾ ಕ್ರಮ: ಮುಂಜಾಗ್ರತ ಫಲಕಗಳ ಅಳವಡಿಕೆ

ಬೆಂಗಳೂರು : ರಾಜ್ಯ ಹೆದ್ದಾರಿಗಳಲ್ಲಿ ಹೆಚ್ಚುತ್ತಿರುವ ಅಪಘಾತ ತಡೆಗೆ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ (ಕೆಶಿಪ್)ಯು ಅತಿಹೆಚ್ಚು ಅಪಘಾತ ಸಂಭವಿಸುತ್ತಿರುವ 20 ರಸ್ತೆ ಗಳನ್ನು ಗುರುತಿಸಿ, ಅಲ್ಲಿ ರಸ್ತೆ ಸುರಕ್ಷತಾ ಕ್ರಮ ಅಳವಡಿಕೆ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ. ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ವರದಿಯಂತೆ 2022-23ನೇ ಸಾಲಿನಲ್ಲಿ ದೇಶದಲ್ಲಿ 4.61 ಲಕ್ಷ ರಸ್ತೆ ಅಪಘಾತಗಳು ಸಂಭವಿಸಿದ್ದು, ಅದರಲ್ಲಿ 1.68 ಲಕ್ಷ ಮಂದಿ ಸಾವನ್ನಪ್ಪಿದ್ದಾರೆ.

ಹೀಗೆ ಅಪಘಾತದ ಸಂಖ್ಯೆಯಲ್ಲಿ ಕರ್ನಾಟಕ 5ನೇ ಸ್ಥಾನದಲ್ಲಿದ್ದು, 2022-23ನೇ ಸಾಲಿನಲ್ಲಿ ಒಟ್ಟು 39,762 ಅಪಘಾತಗಳು ಸಂಭವಿಸಿವೆ. ಆಪೈಕಿ ರಾಜ್ಯ ಹೆದ್ದಾರಿಯಲ್ಲಿಯೇ 10 ಸಾವಿರಕ್ಕೂ ಹೆಚ್ಚಿನ ಅಪಘಾತ ದಾಖಲಾಗಿದೆ.ಹೀಗೆ ಪದೇಪದೆ ಅಪಘಾತಕ್ಕೀಡಾಗುವ ರಾಜ್ಯ ಹೆದ್ದಾರಿಗಳನ್ನು ಗುರುತಿಸಿರುವ ಕೆಶಿಪ್, ಅವುಗಳಲ್ಲಿ ಅಪಘಾತನಿಯಂತ್ರಣಕ್ಕೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಅದರ ಭಾಗವಾಗಿ ಸದ್ಯ 20 ರಸ್ತೆಗಳಲ್ಲಿ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

2 ಭಾಗವಾಗಿ ಕ್ರಮಗಳ ಅಳವಡಿಕೆ: ಕೆಶಿಪ್ ರೂಪಿಸಿರುವ ಯೋಜನೆಯಂತೆ ಉತ್ತರ ಮತ್ತು ಈಶಾನ್ಯ ಹಾಗೂ ದಕ್ಷಿಣಮತ್ತು ಕೇಂದ್ರವಲಯದಲ್ಲಿನ 20 ರಸ್ತೆಗಳನ್ನು ಗುರುತಿಸಿ ಅಪಘಾತ ನಿಯಂತ್ರಣ ಕೆಲಸ ಮಾಡಲು ನಿರ್ಧರಿಸಲಾಗಿದೆ. ಅದರಲ್ಲಿ ಕೆಶಿಪ್ ನ ಉತ್ತರ ಮತ್ತು ಈಶಾನ್ಯ ವಲಯ ವ್ಯಾಪ್ತಿಯಲ್ಲಿ 10 ಹಾಗೂ ದಕ್ಷಿಣಮತ್ತು ಕೇಂದ್ರ ವಲಯ ವ್ಯಾಪ್ತಿಯಲ್ಲಿನ 10 ರಸ್ತೆಗಳಲ್ಲಿ ಸುರಕ್ಷತಾ ಕ್ರಮ ಅಳವಡಿಸಲು ನಿರ್ಧರಿಸಲಾಗಿದೆ.



ಹಲವು ಸುರಕ್ಷತಾ ಕ್ರಮಗಳ ಅನುಷ್ಠಾನ: ಕಳೆದಕೆಲವರ್ಷಗಳಿಂದೀಚೆಗೆಸಂಭವಿಸಿರುವ ಅಪಘಾತ ಪ್ರಕರಣಗಳನ್ನಾಧರಿಸಿ ಪದೇಪದೆ ಅಪಘಾತ ಸಂಭವಿಸುವ ರಸ್ತೆಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಅಲ್ಲದೆ, ಅಪಘಾತ ಸಂಭವಿಸುತ್ತಿರುವ ರಸ್ತೆಗಳ ಪೈಕಿ ಹೆಚ್ಚಿನವು ರಾಜ್ಯ ಹೆದ್ದಾರಿಗೆ ಸಣ್ಣ ರಸ್ತೆಗಳು ಸಂಪರ್ಕಿಸುವ ಸ್ಥಳಗಳಾಗಿವೆ. ಆ ಸ್ಥಳಗಳಲ್ಲಿ ಸುರಕ್ಷತಾ ಕ್ರಮಗಳನ್ನು ಅಳವಡಿಸಲು ಕೆಶಿಪ್ ಮುಂದಾಗಿದೆ. ಸಂಚಾರಿ ನಿಯಮ ಫಲಕಗಳ ಅಳವಡಿಕೆ ಹಾಗೂ ಮುಂಜಾಗ್ರತೆಯನ್ನು ನೀಡುವ ಫಲಕಗಳನ್ನು ಅಳವಡಿಸುವುದು.

ಪಾದಚಾರಿಗಳು ಹೆಚ್ಚಾಗಿ ಓಡಾಡುವ ರಸ್ತೆಗಳಲ್ಲಿ ಸ್ಪೀಡ್ ಬ್ರೇಕರ್‌ಗಳ ಅಳವಡಿಕೆಯಂತಹ ಅನುಷ್ಠಾನಗೊಳಸಲಾಗುತ್ತದೆ. ಜತೆಗೆ ಅಪಘಾತ ಹೆಚ್ಚಿರುವ ರಸ್ತೆಯುದ್ದಕ್ಕೂ ಸೋಲಾರ್ ಪವರ್‌ನಲ್ಲಿ ಬೆಳಗುವ ವಿದ್ಯುತ್ ದೀಪಗಳ ಅಳವಡಿಕೆ, ರಸ್ತೆ ವಿಭಜಕಗಳ ಅಳವಡಿಕೆ, ಈಗಾಗಲೇ ಇರುವ ಅಪ್ರಸ್ತುತ ಎನಿಸುವ ರಸ್ತೆ ಫಲಕಗಳನ್ನು ತೆರವು ಮಾಡಿ, ಸೂಕ್ತ ಮತ್ತು ಸಮರ್ಪಕ ಫಲಕಗಳನ್ನು ಅಳವಡಿಸುವುದು, ರಸ್ತೆ ವಿಭಜಕ ಇಲ್ಲದ ಕಡೆಗಳಲ್ಲಿ ಸೋಲಾರ್ ಸ್ಟಡ್ಸ್‌ಗಳನ್ನು ಅಳವಡಿಸಲಾಗುತ್ತದೆ.

ಅಪಘಾತ ಸಂಭವಿಸಲು ಇರುವ ಕಾರಣಗಳನ್ನು ಮೊದಲು ತಿಳಿದುಕೊಂಡು ಅದಕ್ಕೆ ತಕ್ಕಂತೆ ಯಾವ ರೀತಿಯ ಸುರಕ್ಷತಾ ಕ್ರಮಗಳನ್ನು ಅಳವಡಿಸಬೇಕು ಎಂಬುದನ್ನು ನಿರ್ಧರಿಸಿ ಕ್ರಮ ಕೈಗೊಳ್ಳಲು ಕೆಶಿಪ್ ಮುಂದಾಗಿದೆ. ಒಮ್ಮೆ ಸಂಸ್ಥೆ ನೇಮಕಗೊಂಡ ನಂತರ ಅಧ್ಯಯನ ನಡೆಸಿ ಸುರಕ್ಷತಾ ಕ್ರಮಗಳ ಅಳವಡಿಕೆ ಕಾರ್ಯ ಆರಂಭವಾಗಲಿದೆ.

# ರಾಜ್ಯದಲ್ಲಿ ಈಗಲೂ ಜೆಡಿಎಸ್ ಅನಿವಾರ್ಯವಾಗಿರುವ ಪಕ್ಷ: ಕೇಂದ್ರ ಸಚಿವ ಹೆಚ್ ಡಿಕೆ




ದಾವಣಗೆರೆ. : ಜೆಡಿಎಸ್ ರಾಜ್ಯಾಧ್ಯಕ್ಷರಾಗಿದ್ದ ಸಿದ್ದರಾಮಯ್ಯ ಸೇರಿದಂತೆ ಅನೇಕ ನಾಯಕರು ಕೇವಲ ಅಧಿಕಾರಕ್ಕಾಗಿ ಕಾರ್ಯಕರ್ತರಿಗೆ ದ್ರೋಹ ಮಾಡಿದವರು ಎಂದು ಕೇಂದ್ರ ಸಚಿವ, ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ. ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು. ದಾವಣಗೆರೆ ಅರ್ಬನ್ ಕೋ ಆಪರೇಟಿವ್ ಬ್ಯಾಂಕ್ ಸಮುದಾಯ ಭವನದಲ್ಲಿ ಜೆಡಿಎಸ್ ಸದಸ್ಯತ್ವ ನೋಂದಣಿ ಮತ್ತು ಬೂತ್ ಸಮಿತಿ ರಚನೆ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನ ಮತ್ತು ಶಕ್ತಿಯನ್ನ ಗುರುತಿಸಿದ್ದೇ ಜೆಡಿಎಸ್ ಕಾರ್ಯಕರ್ತರು. ಅಂತಹ ಕಾರ್ಯರ್ತರ ದುಡಿಮೆಯ ಫಲವಾಗಿಯೇ ರಾಜ್ಯ ಮಟ್ಟದ ನಾಯಕರಾಗಿ ಬೆಳೆದಂತಹವರು ಕೇವಲ ಅ[illegible]ಕಾರಕ್ಕಾಗಿ ದ್ರೋಹ ಮಾಡಿದರು ಎಂದು ದೂರಿದರು.ಈಗೇನು ಕಾಂಗ್ರೆಸ್ ಸರ್ಕಾರದಲ್ಲಿ ಸಚಿವರಾಗಿದ್ದಾರಲ್ಲ ಸತೀಶ್ ಜಾರಕಿಹೊಳಿ, ಸಂತೋಷ್ ಲಾಡ್, ಮಧು ಬಂಗಾರಪ್ಪ, ಮಾಜಿ ಸಚಿವ ಆರ್.ವಿ. ದೇಶಪಾಂಡೆ ಎಲ್ಲರೂ ಜೆಡಿಎಸ್‌ನಲ್ಲಿ ಇದ್ದವರೇ. ಬಿಜೆಪಿಯ ಕೆಲವಾರು ನಾಯಕರು ಜೆಡಿಎಸ್‌ನಲ್ಲಿದ್ದರು. ಹಾಗಾಗಿಯೇ ಜೆಡಿಎಸ್‌ನ್ನ ನಾಯಕರ ಸೃಷ್ಟಿ ಮಾಡುವ ಪಕ್ಷ ಎಂದು ಕರೆಯುವುದು. ನಾಯಕರಾಗಿ ಬೆಳೆದವರು ಪಕ್ಷ ಬಿಟ್ಟು ಹೋಗುವಾಗ ಏನೇನೋ ಹೇಳಿ ಹೋದರು ಎಂದರು. ರಾಜ್ಯದಲ್ಲಿ ಜೆಡಿಎಸ್ ಈಗಲೂ ಕಾಂಗ್ರೆಸ್‌ಗೆ ಪರ್ಯಾಯವಾಗಿ ಉಳಿದಿರುವುದಕ್ಕೆ ಕಾರ್ಯಕರ್ತರೇ ಕಾರಣ. ಮುಂದಿನ ವಿಧಾನ ಸಭಾ ಚುನಾವಣೆಯಲ್ಲಿ ಬಿಜೆಪಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡಾಗ 90-95 ಸ್ಥಾನ ಸಿಗುತ್ತದೆ. ಆಗ ಟಿಕೆಟ್ ಕೊಡಿಸಬೇಕು ಎಂದಾದರೆ ಎಲ್ಲರೂ ಪಕ್ಷದ ಸಂಘಟನೆ ಮಾಡಬೇಕು. ಪ್ರತಿ ಬೂತ್‌ನಲ್ಲಿ ಅತಿ ಹೆಚ್ಚು ಸದಸ್ಯರ ನೋಂದಣಿ ಮಾಡಿಸಬೇಕು. ಆಗ ನಾನು ಸಹ ನಿಮ್ಮ ಪರ ಗಟ್ಟಿಯಾಗಿ ನಿಲ್ಲಲು ಸಾಧ್ಯ ಆಗುತ್ತದೆ. ಹಾಗಾಗಿ ಯಾರೂ ಸಹ ಸದಸ್ಯತ್ವನೋಂದಣಿಯನ್ನಲಘುವಾಗಿ ಪರಿಗಣಿಸಬೇಡಿ ಎಂದು ತಿಳಿಸಿದರು.

# ಜಡಿ ಮಳೆಗೆ ಬೆಂಗಳೂರು ತತ್ತರ: ಸತತ 18 ತಾಸು ಬಿಟ್ಟೂಬಿಡದೆ ಸುರಿದ ಮಳೆ

ಬೆಂಗಳೂರು : ನಗರದಲ್ಲಿ ಸೋಮವಾರ ತಡರಾತ್ರಿಯಿಂದ ಬಹುತೇಕ ಗಂಟೆಗಳ ಕಾಲ ಬಿಟ್ಟೂಬಿಡದೇ ಸುರಿದ ಜಡಿ ಮಳೆಗೆ ಉದ್ಯಾನ ನಗರಿ ನೆನೆದು ಮುದ್ದೆಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡು ಇಡೀ ನಗರವೇ ಜಲಾವೃತಗೊಂಡಿದೆಯೋ ಎಂಬ ಭಾವ ಮೂಡಲು ಕಾರಣವಾಯ್ತು. ರಸ್ತೆಗಳಲ್ಲಿ ನೀರು ನದಿಯಂತೆ ಹರಿದು ಸಂಚಾರ ವ್ಯತ್ಯಯಕ್ಕೆ ಕಾರಣವಾದರೆ, ಅಪಾರ್ಟ್ ಮೆಂಟ್‌ಗಳ ಬೇಸ್‌ಮೆಂಟ್‌ಗಳಲ್ಲಿದ್ದ ವಾಹನಗಳು ಮುಳುಗಿ, ಜನ ರಸ್ತೆಗಿಳಿಯಲು ಸಂಕಟ ಪಟ್ಟು ವ್ಯಾಪಾರ ಕುಸಿಯಿತು. ಇಡೀ ದಿನ ಮೋಡ ಕವಿದ ವಾತಾವರಣ ಹಾಗೂ ಜಡಿ ಮಳೆ ಇಡೀ ನಗರವನ್ನು ಚಳಿಯಲ್ಲಿ ನಡುಗಿಸಿತು.

ಆಗ್ನೆಯಬಂಗಾಳಉಪಮಹಾಸಾಗರದಲ್ಲಿ ವಾಯುಭಾರ ಕುಸಿತದಿಂದ ಉಂಟಾಗಿರುವ ಕಾರಣ ಇನ್ನೂ 2-3 ದಿನ ಇದೇ ರೀತಿಯ ಜಡಿಮಳೆ ಸುರಿಯುವ ಸಾಧ್ಯತೆಯಿದೆ ಎಂದು ಹವಾಮಾನ ತಜ್ಞರು ಮುನ್ಸೂಚನೆ ನೀಡಿದ್ದಾರೆ. ಹೀಗಾಗಿ ಮಳೆ ಅಬ್ಬರ ಇದೇ ರೀತಿ ಮುಂದುವರೆದರೆ ನಿತ್ಯದ ಜೀವನ ಮತ್ತಷ್ಟು ಹೈರಾಣಾಗಲಿದೆ. ವಿಪರೀತ ಮಳೆಯಿಂದಾಗಿ ನಗರದ ಹೃದಯಭಾಗ ಮೆಜೆಸ್ಟಿಕ್ ಸೇರಿದಂತೆ ಎಲ್ಲೆಡೆ ರಸ್ತೆಗಳಲ್ಲಿ ನೀರು ನಿಂತು ಅವಾಂತರ ಸೃಷ್ಟಿಸಿತು. ಉತ್ತರದ ಭಾಗಗಳಾದ ವಿದ್ಯಾರಣ್ಯಪುರ, ಕೋರಮಂಗಲ, ಯಲಹಂಕ, ದೇವನಹಳ್ಳಿ, ಹೆಣ್ಣೂರು ಕ್ರಾಸ್, ಜಕ್ಕೂರು, ಥಣಿಸಂದ್ರಗಳಲ್ಲಿ ಮಳೆ ಹೆಚ್ಚಾಗಿ ಆರ್ಭಟಿಸಿತು.

ದಕ್ಷಿಣ ಬೆಂಗಳೂರಿನ ರಾಜಾಜಿನಗರ, ಮಲ್ಲೇಶ್ವರಂ,ವಿಜಯನಗರ,ಚಂದ್ರಾಲೇಔಟ್, ನಾಗರಭಾವಿ, ಕೆಂಗೇರಿ ಉಪನಗರ, ಉಲ್ಲಾಳ, ರಾಜರಾಜೇಶ್ವರಿ ನಗರ, ಮೈಸೂರು ರಸ್ತೆ ಪ್ರದೇಶದಲ್ಲಿ ಆಗಾಗ ಜಡಿಮಳೆ ಬಂದರೆ ಹಲವು ಸಮಯ ಜೋರಾದ ಮಳೆಯಾಯಿತು. ಪರಪ್ಪನ ಅಗ್ರಹಾರ ಸುತ್ತಮುತ್ತ ಭಾರಿ ಮಳೆ ಸುರಿದ ಪರಿಣಾಮ ಮುಖ್ಯ ರಸ್ತೆಯಲ್ಲಿ ನೀರು ತುಂಬಿ ವಾಹನ ಸವಾರರು ಸಮಸ್ಯೆಗೀಡಾದರು. ಸಣ್ಣ ಮಳೆಗೆ ರಸ್ತೆಯಲ್ಲಿ ಎರಡು ಅಡಿಯಷ್ಟು ನೀರು ನಿಂತಿದ್ದು, ಹೊಸ ರೋಡ್‌ನಿಂದ ಸರ್ಜಾಪುರ ಸಂಪರ್ಕಿಸುವ ರಸ್ತೆ ಜಲಾವೃತಗೊಂಡಿತ್ತು. ಬೆಳ್ಳಂದೂರು ಕೆರೆ ರಸ್ತೆಯಲ್ಲಿ ವಾಹನ ಸಂಚಾರ ಕಷ್ಟವಾಗಿತ್ತು.



ದೊಡ್ಡದೊಡ್ಡ ಗುಂಡಿ, ಕೆಸರಿನ ರಸ್ತೆಗಳಲ್ಲಿ ವಾಹನಗಳು ಸಿಲುಕಿಕೊಂಡವು. ಸುತ್ತ 2 ಕಿ.ಮೀ. ಸಂಚಾರ ಸಾಧ್ಯವಾಗದೆ ಟ್ರಾಫಿಕ್ ಜಾಮ್ ಉಂಟಾಗಿತ್ತು. ಹಲವು ವಾಹನಗಳು ಕೆಟ್ಟು ನಿಂತು ಸವಾರರು ಪೇಚಿಗೆ ಸಿಲುಕಿದರು. ಜೋರು ಮಳೆಯ ಪರಿಣಾಮ ಕಾಮಗಾರಿ ನಡೆಯುತ್ತಿದ್ದ ಜಯ ಮಹಲ್ ರಸ್ತೆಯುದ್ದಕ್ಕೂ ರಾಡಿ, ಕೆಂಪುಮಣ್ಣಿನ ನೀರು ಹರಿಯಿತು. ವಾಹನಗಳು ರಸ್ತೆಯಲ್ಲಿ ಓಡಾಡದ ಸ್ಥಿತಿ ನಿರ್ಮಾಣವಾಗಿತ್ತು. ಅಲ್ಲದೇ ಉತ್ತರ ಹಳ್ಳಿ ರೋಡ್, ಎಚ್‌ಎಂಟಿ ಲೇಔಟ್, ಸದಾ ಶಿವನಗರ,ಓಕಳೀಪುರಂ,ವಿಂಡರ್‌ಮ್ಯಾನರ್, ಗೊರಗುಂಟೆ ಪಾಳ್ಯಗಳಲ್ಲಿ ಮಳೆ ವಿಪರೀತವಾಗಿತ್ತು.

ಅಂಡರ್‌ಪಾಸ್‌ನಲ್ಲಿ ನೀರು: ಮುರುಗೇಶ್ ಪಾಳ್ಯ ಬೆಳ್ಳಂದೂರು ಮುಖ್ಯ ರಸ್ತೆ ನೀರು ನಿಂತು ಕಾರು, ಬೈಕ್ ಸೇರಿ 10ಕ್ಕೂ ಹೆಚ್ಚು ವಾಹನಗಳು ಕೆಟ್ಟು ನಿಂತಿದ್ದವು. ಕೊಡಗೆಹಳ್ಳಿ ಅಂಡರ್‌ಪಾಸ್‌ನಲ್ಲಿ 5 ಅಡಿ ನೀರು ನಿಂತಿತ್ತು. ಇಲ್ಲಿ ಟಿಟಿ ವಾಹನವೊಂದು ಸಿಲುಕಿತು. ಏರ್‌ಪೋರ್ಟ್ ರಸ್ತೆ ಜಾಮ್: ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆ ಸಂಪೂರ್ಣ ಟ್ರಾಫಿಕ್ ಜಾಮ್ ಉಂಟಾಗಿತ್ತು. ಏರ್‌ಪೋರ್ಟ್‌ನಿಂದ ಹೋಗಿ ಬರುವ ವಾಹನ ಸವಾರರಲ್ಲಿ ರೇಜಿಗೆ ಹುಟ್ಟಿಸಿತು. ಈ ಬಗ್ಗೆ ಹಲವರು 'ಎಕ್ಸ್'ನಲ್ಲಿ ಬೇಸರ ತೋಡಿಕೊಂಡರು. ಹುಣಸಮಾರನಹಳ್ಳಿ ಬಳಿ ಟ್ರಾಫಿಕ್ ಜಾಮ್ ಆಗಿದ್ದರಿಂದ ಗಂಟೆಗಟ್ಟಲೆ ವಾಹನಗಳು ನಿಂತಿದ್ದವು.

ಸರಾಸರಿಗಿಂತ 228% ಅಧಿಕ ಮಳೆ: ನಗರದಲ್ಲಿ ಎಡ ಬಿಡದೇ ಸುರಿಯುತ್ತಿರುವ ಮಳೆಯಿಂದ ನಗರದ ವಿವಿಧ ಭಾಗದಲ್ಲಿ ಸಮಸ್ಯೆ ಉಂಟಾದ ಹಿನ್ನೆಲೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಂಗಳವಾರ ಬಿಬಿಎಂಪಿ ಕೇಂದ್ರ ಕಚೇರಿಯ ನಿಯಂತ್ರಣ ಕೊಠಡಿಗೆ ಭೇಟಿ ನೀಡಿ ಸ್ವತಃ ಕರೆ ಸ್ವೀಕರಿಸಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿದರು. ಉಪಮುಖ್ಯಮಂತ್ರಿ ಎಲ್ಲಾ ವಲಯ ಅಧಿಕಾರಿಗಳ ಜತೆಗೆ ಆನ್‌ಲೈನ್‌ನಲ್ಲಿ ಸಭೆ ನಡೆಸಿದರು. ಮಳೆ ಅನಾಹುತ ನಿಯಂತ್ರಣ ಕ್ರಮಗಳು, ನಿಯಂತ್ರಣ ಕೊಠಡಿ ಕಾರ್ಯನಿರ್ವಹಣೆ, ಸ್ವಚ್ಛತಾ ಡ್ರೈವ್ ಸೇರಿದಂತೆ ಇನ್ನಿತರೆ ಸಮಸ್ಯೆಗಳ ಕುರಿತು ಚರ್ಚಿಸಿದರು.

ಬಳಿಕ ಸುದ್ದಿಗಾರರರೊಂದಿಗೆ ಮಾತನಾಡಿದ ಅವರು, ರಾಜಕಾಲುವೆ, ತಗ್ಗು ಪ್ರದೇಶಗಳ ಸಮಸ್ಯೆಗೆ ಳನ್ನು ಪರಿಹರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾ ಗುತ್ತದೆ. ಕಳೆದ 24 ತಾಸುಗಳಿಂದ ವಾಯುಭಾರ ಕುಸಿತ ಉಂಟಾಗಿ ಒಂದು ದಿನದಲ್ಲಿ ಬರಬೇಕಾದ ಸರಾಸರಿ ಮಳೆಗಿಂತ ಶೇ.228 ರಷ್ಟು ಮಳೆ ಹೆಚ್ಚು ಬಂದಿದೆ. ಹೀಗಾಗಿ, ಮುಂದಿನ ಮೂರು ದಿನಗಳ ಕಾಲ ನಾಗರಿಕರು ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದರು.

# ಪೌರಕಾರ್ಮಿಕರಿಗೆ ದಸರಾ ಉಡುಗೊರೆ ನೀಡಿದ ಗಡಿಗುಡಾಳ್ ಮಂಜುನಾಥ್

ದಾವಣಗೆರೆ: ನಗರದ ಎಂಸಿಸಿ ಬಿ ಬ್ಲಾಕ್ ನಲ್ಲಿ ವಿಜಯದಶಮಿ ಹಾಗೂ ದಸರಾ ಪ್ರಯುಕ್ತ ಪೌರ ಕಾರ್ಮಿಕರಿಗೆ ಮಹಾನಗರ ಪಾಲಿಕೆಯ ಆಡಳಿತ ಪಕ್ಷದ ಸದಸ್ಯರೂ ಆದ ಸದಸ್ಯ ಜಿ. ಎಸ್. ಮಂಜುನಾಥ್ ಗಡಿಗುಡಾಳ್ ನೇತೃತ್ವದಲ್ಲಿ ಉಡುಗೊರೆ ನೀಡಿ ಗೌರವಿಸಲಾಯಿತು. ಬಳಿಕ ಮಾತನಾಡಿದ ಗಡಿಗುಡಾಳ್ ಮಂಜುನಾಥ್ ಅವರು, ಪೌರಕಾರ್ಮಿಕರು ಮಳೆ, ಗಾಳಿ, ಚಳಿ ಎನ್ನದೇ ನಗರದ ಸ್ವಚ್ಛತೆಗೆ ಶ್ರಮಿಸುತ್ತಾರೆ. ಆರೋಗ್ಯದ ಕಡೆಗೆ ಹೆಚ್ಚಿನ ಗಮನ ನೀಡುವ ಜೊತೆಗೆ ನಗರ ಸ್ವಚ್ಛತೆಯಾಗಿರಲು ಅವರೇ ಕಾರಣ. ಅವರಿಗೆ ಗೌರವಿಸಬೇಕೆಂಬ ಸದುದ್ದೇಶದಿಂದ ಉಚಿತವಾಗಿ ಉಡುಗೊರೆ ನೀಡಿ ಅಭಿನಂದಿಸಲಾಗುತ್ತದೆ. ಕಳೆದ ವರ್ಷವೂ ಪೌರಕಾರ್ಮಿಕರಿಗೆ ಸನ್ಮಾನಿಸಲಾಗಿತ್ತು. ಈ ವರ್ಷವೂ ಈ ಪರಂಪರೆ ಮುಂದುವರಿದಿದೆ ಎಂದು ತಿಳಿಸಿದರು. ಪೌರ ಕಾರ್ಮಿಕರ ಶ್ರಮದಿಂದಲೇ 38 ನೇ ವಾರ್ಡ್ ಎಂ ಸಿ ಸಿ ಬಿ ಬ್ಲಾಕ್ ಇಷ್ಟೊಂದು ಸ್ವಚ್ಛವಾಗಿರಲು ಕಾರಣ.



ತಮಗೆ ವಹಿಸಿದ ಕೆಲಸವನ್ನು ಜವಾಬ್ದಾರಿಯುತವಾಗಿ ನಿರ್ವಹಿಸುತ್ತಾರೆ. ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದು, ಸ್ವಚ್ಛತೆ ವಿಚಾರದಲ್ಲಿ ಜನರ ಸಮಸ್ಯೆಗೆ ಕೂಡಲೇ ಸ್ಪಂದಿಸುತ್ತಾರೆ. ಪೌರಕಾರ್ಮಿಕರ ಕಾರ್ಯಕ್ಕೆ ಎಲ್ಲರೂ ಪ್ರಶಂಸೆ ವ್ಯಕ್ತಪಡಿಸಬೇಕು ಎಂದು ಹೇಳಿದರು. ಈ ಬಾರಿ ದೇವರ ಕೃಪೆಯಿಂದ ಒಳ್ಳೆಯ ಮಳೆಯಾಗಿದೆ. ರೈತರು ಸಮೃದ್ಧವಾಗಿರಲಿ. ಎಲ್ಲರಿಗೂ ಒಳಿತು ಮಾಡಲಿ ಎಂದು ದುರ್ಗಾಂಬಿಕಾ ದೇವಿಯಲ್ಲಿ ಪ್ರಾರ್ಥಿಸಿದ್ದೇವೆ. ದಸರಾ ಮತ್ತು ವಿಜಯದಶಮಿ ಹಬ್ಬವನ್ನು ಅದ್ಧೂರಿಯಾಗಿ ಆಚರಿಸಲಾಗಿದ್ದು, ಕಳೆದ ವರ್ಷ ಬರಗಾಲದ ಕಾರಣ ಕಳೆಗುಂದಿತ್ತು. ಚೆನ್ನಾಗಿ ಬೆಳೆ ಬಂದು ರೈತರ ಬದುಕು ಹಸನಾಗಲಿ ಎಂದು ಪ್ರಾರ್ಥಿಸಿದರು.

# ದೇಶಪ್ರೇಮದ ವ್ಯಾಖ್ಯಾನವೇ ಬದಲಾಗುತ್ತಿರುವುದು ದುರಂತ

ದಾವಣಗೆರೆ. ; ಬಂಡಾಯ ಸಾಹಿತ್ಯ ಕೃತಿಕಾರ ಮತ್ತು ಸಾಮಾಜಿಕ ಸಂಬಂಧ ಪರಸ್ಪರವಾಗಿರಬೇಕು ಎಂಬುದನ್ನು ಕರ್ನಾಟಕ ತೋರಿಸಿದೆ ಎಂದು ಮಾನವ ಬಂಧುತ್ವ ವೇದಿಕೆ ರಾಜ್ಯ ಸಂಚಾಲಕ ಡಾ. ಎ.ಬಿ. ರಾಮಚಂದ್ರಪ್ಪ ತಿಳಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಹರಿಹರ ತಾಲೂಕು ಘಟಕ, ಬಂಡಾಯ ಸಾಹಿತ್ಯ ಸಂಘಟನೆ, ಪರಸ್ಪರ ಬಳಗ ಹರಿಹರ ಹಾಗೂ ಮಾನವ ಬಂಧುತ್ವ ವೇದಿಕೆ ಸಂಯುಕ್ತಾಶ್ರಯದಲ್ಲಿ ಕುವೆಂಪು ಕನ್ನಡ ಭವನದಲ್ಲಿ ಹರಿಹರದ ಕವಿ, ಲೇಖಕ ಅನುವಾದಕ ಜೆ. ಕಲೀಂ ಬಾಷ ಇವರ ಹಿಂದಿ ಭಾಷೆಯಿಂದ ಕನ್ನಡಕ್ಕೆ ಅನುವಾದಿತ ಕೃತಿ ಕ್ರಾಂತಿಕಾರಿ ಸ್ವಾತಂತ್ರ್ಯ ಹುತಾತ್ಮ ಕವಿ ರಾಮ್ ಪ್ರಸಾದ್ ಬಿಸ್ಮಿಲ್.. (ಆತ್ಮಕಥೆ) ಕೃತಿಯ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.ಇವತ್ತು ದೇಶಪ್ರೇಮದ ವ್ಯಾಖ್ಯಾನವೇ ಬದಲಾಗುತ್ತಿದೆ. ಸತ್ಯ ಮರೆಮಾಚಿ, ಅಸತ್ಯವೇ ಸತ್ಯ ಎಂಬುದನ್ನು ಬಿಂಬಿಸಲಾಗು ತ್ತಿದೆ. ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಬ್ರಿಟಿಷ್ ಜೊತೆ ಶಾಮೀಲಾದಂತಹವರು ದೇಶಪ್ರೇಮದ ಬಗ್ಗೆ ಹೇಳುವಂತಾಗುತ್ತಿದೆ ಎಂದು ತಿಳಿಸಿದರು. ಇಡೀ ಭಾರತದ ಸ್ವಾತಂತ್ರ್ಯದ ಹೋರಾಟದಲ್ಲಿ ಶೇ. 90 ರಷ್ಟು ಜನರು ಬ್ರಿಟಿಷರ ವಿರುದ್ಧ ನಿಂತಿದ್ದವರುಎಂಬುದನ್ನುಮರೆಯಬಾರದು.



ರಾಷ್ಟ್ರೀಯತೆಯ ವ್ಯಾಖ್ಯಾನವೇ ಬದಲಾಯಿಸಲಾಗುತ್ತಿದೆ. ಇಂತಹ ಸಂದರ್ಭದಲ್ಲಿ ಸಾಮಾಜಿಕ ಸಾಮರಸ್ಯದ ಭಾರತವನ್ನು ಮರು ನಿರ್ಮಾಣ ಮಾಡುವ ಜವಾಬ್ದಾರಿ ಸಾಹಿತ್ಯ ವಲಯದ ಮೇಲಿದೆ ಎಂದು ತಿಳಿಸಿದರು.ಈಗ ವಿಜ್ಞಾನದ ವಿರುದ್ಧ ಹೋರಾಟ ನಡೆಯುವುದು ಕಾಣಬರುತ್ತಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸಾವಿರಾರು ಜನರು ಕಾಣಬಹುದು. ಆದರೆ, ಏಕ ನಾಯಕನನ್ನು ಮುನ್ನಲೆಗೆ ತರಲಾಗುತ್ತಿದೆ ಎಂದು ತಿಳಿಸಿದರು.ಕನ್ನಡ ಪುಸ್ತಕ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಕೃತಿ ಬಿಡುಗಡೆ ಮಾಡಿದರು.ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ಬಿ. ವಾಮದೇವಪ್ಪ ಅಧ್ಯಕ್ಷತೆ ವಹಿಸಿದ್ದರು. ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಮಂಜಣ್ಣ, ಹಿರಿಯ ಪತ್ರಕರ್ತ ಬಿ.ಎನ್.ಮಲ್ಲೇಶ್, ಹರಿಹರದ ವಿಶ್ರಾಂತ ಪ್ರಾಚಾರ್ಯರಾದ ಪ್ರೊ. ಎಚ್.ಎ. ಭಿಕ್ಷಾವರ್ತಿಮಠ, ಪ್ರೊ. ಸಿ.ವಿ.ಪಾಟೀಲ್, ಜೆ. ಕಲೀಂಬಾಷಾ, ಎಚ್. ನಿಜಗುಣ, ಜಿ. ಶಂಕರಮೂರ್ತಿ, ರಿಯಾಜ್ ಅಹಮ್ಮದ್, ಮಹೇಶ್ ಬಳ್ಳಾರಿ, ಎಚ್.ಕೆ.ಕೊಟ್ರಪ್ಪ ಇತರರು ಇದ್ದರು. ಹರಿಹರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಿ.ಎಂ. ಮಂಜುನಾಥಯ್ಯ ಸ್ವಾಗತಿಸಿದರು.

## ಅ. 23 ರಂದು ಕಿತ್ತೂರ ರಾಣಿ ಚನ್ನಮ್ಮ ಜಯಂತಿ ಆಚರಣೆ



ಕಲಬುರಗಿ: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಅಕ್ಟೋಬರ 23 ರಂದು ಬೆಳಿಗ್ಗೆ 11 ಗಂಟೆಗೆ ಕಿತ್ತೂರ ರಾಣಿ ಚನ್ನಮ್ಮ ಜಯಂತಿಯನ್ನು ಡಾ.ಎಸ್.ಎಂ.ಪಂಡಿತ ರಂಗಮಂದಿರದಲ್ಲಿ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಹೇಳಿದರು. ಅವರು ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ವಿಜೃಂಭಣೆಯಿಂದ ಆಚರಿಸೋಣ ಎಂದು ತಿಳಿಸಿದರು. ಕಾರ್ಯಕ್ರಮಕ್ಕೆ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಸರಕಾರಿ, ಅರೆ ಸರಕಾರಿ, ಕಚೇರಿಗಳಲ್ಲಿ ಹಾಗೂ ಸರಕಾರಿ ಶಾಲಾ ಕಾಲೇಜುಗಳಲ್ಲಿ,ಹಾಗೂ ಅನುದಾನ ಶಾಲಾ ಕಾಲೇಜುಗಳಲ್ಲಿ ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಜಯಂತಿಯನ್ನು ಆಚರಿಸಲು ತಿಳಿಸಿದರು. ಭಾವಚಿತ್ರಕ್ಕೆ ಮಾಲಾರ್ಪಣೆ ಹೂದಾನಿಗಳಿಂದ ಆಲಂಕರಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು. ಕುಡಿಯುವ ನೀರು,ಸ್ವಚ್ಛತೆ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತೋತ್ಸವ ಸಮಿತಿ ಅಧ್ಯಕ್ಷತೆಗೆ ಜ್ಯೋತಿ ಎಂ ಮರಗೋಳ ಆಯ್ಕೆಮಾಡಲಾಯಿತು. ಉಪನ್ಯಾಸಕ ಡಾ.ಮೀನಾಕ್ಷಿ ಬಾಳಿ ಅವರನ್ನು ಆಯ್ಕೆಮಾಡಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ ಮಾತನಾಡಿ,ನಾಡಗೀತೆ ಸಂಗೀತ ಕಾರ್ಯಕ್ರಮ ಹಾಗೂ ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸಲಾಗುವುದು ಮತ್ತು ಮತ್ತು ಕಿತ್ತೂರು ರಾಣಿ ಚೆನ್ನಮ್ಮರವರು ಭವ್ಯ ಮೆರುವಣಿಗೆಯು ಬೆಳ್ಳಗೆ 9 ಗಂಟೆಗೆ ಸರ್ದಾರ್ ವಲ್ಲಾಬಾಯಿ ಪಟೇಲ್ ವೃತ್ತಿದಿಂದ ಡಾ.ಎಸ್.ಎಂ.ಪಂಡಿತ ರಂಗ ಮಂದಿರದವರೆಗೆ ನಡಿಯಲಿದೆ ಎಂದು ಹೇಳಿದರು. ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಶಿವಶರಣಪ್ಪ ಮೂಳೆಗಾಂವ, ಸಮಾಜದ ಮುಖಂಡರಾದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜ ಕಾರ್ಯದರ್ಶಿ ಡಾ. ಶ್ರೀ ಶೈಲ ಘೋಳಿ. ರಾಷ್ಟ್ರೀಯ ಬಸವ ದಳ,ಬಸವ ಮಂಟಪ ಮಹಾಂತನಗರ ಆರ್.ಜಿ.ಶೆಟ್ಟಿಗಾರ,.ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕಾರ್ಯಕಾರಣಿ ಶ್ರೀದೇವಿ ಎಸ್.ಅಖಿಲ ಭಾರತ ವೀರ ಶೈವ ಲಿಂಗಾಯತ ಮಾಹಾಸಭಾ ಕಾರ್ಯಕಾರಿಣಿ ವಿಜಯಲಕ್ಷ್ಮೀ ಡಿ ಪಾಟೀಲ್. ಸೇರಿದಂತೆ ಸಮಾಜ ಮುಖಂಡರು ಭಾಗವಹಿಸಿದ್ದರು.

## ಜಿಲ್ಲೆಯ ಸಮತೋಲಿತ ಅಭಿವೃದ್ಧಿಗೆ ಕಾರ್ಪೊರೇಟ್ ಕಂಪನಿಗಳು ಕೈಜೋಡಿಸಬೇಕು: ಜಿಲ್ಲಾಧಿಕಾರಿ



ಕಲಬುರಗಿ: ಜಿಲ್ಲೆಯ ಸರ್ವಾಂಗೀಣ ಮತ್ತು ಸಮತೋಲಿತ ಅಭಿವೃದ್ಧಿಗೆ ಸಿಮೆಂಟ್, ಸಕ್ಕರೆ ಕಾರ್ಖಾನೆ ಸೇರಿದಂತೆ ಕಾರ್ಪೊರೇಟ್ ಕಂಪನಿಗಳು ಕೈಜೋಡಿಸಬೇಕೆಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು.

ಮಂಗಳವಾರ ತಮ್ಮ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಸಿಮೆಂಟ್, ಸಕ್ಕರೆ ಕಾರ್ಖಾನೆ ಹಾಗೂ ಬ್ಯಾಂಕರ್ಸ್ ಗಳ ಸಭೆ ನಡೆಸಿದ ಅವರು, ಕಾರ್ಖಾನೆಗಳು ಮತ್ತು ಬ್ಯಾಂಕ್ ಗಳು ತಮ್ಮ ಸಾಮಾಜಿಕ ಹೊಣೆಗಾರಿಕೆ (ಸಿ.ಎಸ್.ಆರ್.) ನಿಧಿಯನ್ನು ಸಮುದಾಯದ ಅಭಿವೃದ್ಧಿಗೆ ವಿನಿಯೋಗಿಸಬೇಕೆಂದರು.

ವಿಶೇಷವಾಗಿ ಶಿಕ್ಷಣ, ಆರೋಗ್ಯ, ಕ್ರೀಡೆ ಕ್ಷೇತ್ರಕ್ಕೆ ಕಂಪನಿಗಳು ಹೆಚ್ಚಿನ ಒತ್ತು ನೀಡಬೇಕು. ರಾಜ್ಯ ಸರ್ಕಾರದ ಆಶಯದಂತೆ ಶಾಲೆಗಳನ್ನು ದತ್ತು ಪಡೆಯಬೇಕು. ಸಮುದಾಯಧಾರಿತ ಮೂಲಸೌಕರ್ಯ ಬಲವರ್ಧನೆಗೂ ಆದ್ಯತೆ ನೀಡಬೇಕೆಂದ ಅವರು, ಸಮುದಾಯಧಾರಿತ ಯೋಜನೆಗಳ ಪೂರ್ಣಕ್ಕೆ ಅನುದಾನ ಕೊರತೆ ಇದ್ದಲ್ಲಿ ಸಿ.ಎಸ್.ಆರ್ ನಿಧಿ ಬಳಕೆಗೆ ಆಯಾ ಇಲಾಖೆಯವರು ಕೂಡಲೆ ಪಟ್ಟಿ ಸಲ್ಲಿಸಬೇಕೆಂದು ಸೂಚಿಸಿದರು. ಡಾ.ಸರೋಜಿನಿ ಮಹಿಷಿ ವರದಿ ಪ್ರಕಾರ ಪ್ರತಿ ಕಾರ್ಖಾನೆಯಲ್ಲಿ 50ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಮಿಕರಿದ್ದಲ್ಲಿ ಗ್ರೂಪ್ 'ಎ' ವೃಂದದಲ್ಲಿ ಶೇ.65, ಗ್ರೂಪ್ 'ಬಿ' ವೃಂದದಲ್ಲಿ ಶೇ.80 ಹಾಗೂ ಗ್ರೂಪ್ 'ಸಿ' ಮತ್ತು 'ಡಿ' ವೃಂದದಲ್ಲಿ ಶೇ.100 ರಷ್ಟು ಉದ್ಯೋಗ ಸ್ಥಳೀಯರಿಗೆ ನೀಡಬೇಕೆಂಬ ನಿಯಮವಿದ್ದು, ಎಲ್ಲಾ ಕಾರ್ಪೊರೇಟ್ ಕಂಪನಿಗಳು ಇದನ್ನು ಕಡ್ಡಾಯವಾಗಿ ಪಾಲಿಸಬೇಕು. ಇನ್ನು ಜಿಲ್ಲಾ ಕೈಗಾರಿಕೆ ಕೇಂದ್ರದ ಅಧಿಕಾರಿಗಳು ಕಾರ್ಖಾನೆಗಳಿಂದ ಉದ್ಯೋಗಿಗಳ ವಿವರ ಪಡೆದು ಕಾಲ ಕಾಲಕ್ಕೆ ಇದನ್ನು ಪರಿಶೀಲಿಸಬೇಕೆಂದು ಡಿ.ಐ.ಸಿ. ಜಂಟಿ ನಿರ್ದೇಶಕಿ ಸುರೇಖಾ ಮುನ್ನೋಳ್ಳಿ ಅವರಿಗೆ ಡಿ.ಸಿ ನಿರ್ದೇಶನ ನೀಡಿದರು.

**ಕನ್ನಡ ನಾಮಫಲಕ ಕಡ್ಡಾಯ:**

ಎಲ್ಲಾ ಕಾರ್ಖಾನೆಗಳ ನಾಮ ಫಲಕಗಳನ್ನು ಕಡ್ಡಾಯವಾಗಿ ಕನ್ನಡದಲ್ಲಿ ಬರೆಸಬೇಕು. ಈ ಸಂಬಂಧ ಸರ್ಕಾರಿ ಆದೇಶವನ್ನು ಚಾಚುತಪ್ಪದೆ ಪಾಲಿಸಬೇಕೆಂದು ಡಿ.ಸಿ ಕಾರ್ಪೊರೇಟ್ ಪ್ರತಿನಿಧಿಗಳಿಗೆ ಸೂಚಿಸಿದರು.

**ಐ.ಟಿ.ಎಫ್ ಟೆನಿಸ್ ಟೂರ್ನಿಗೆ ಸಹಕರಿಸಿ:**

ಬರುವ ನವೆಂಬರ್ 17 ರಿಂದ 24ರ ವರೆಗೆ ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಐ.ಟಿ.ಎಫ್ ಅಂತರಾಷ್ಟ್ರೀಯ ಮಟ್ಟದ ಲಾನ್ ಟೆನಿಸ್ ಟೂರ್ನಾಮೆಂಟ್ ಆಯೋಜಿಸಲಾಗಿದೆ. ಕಳೆದ ವರ್ಷ ಟೂರ್ನಿ ಯಶಸ್ಸಿಗೆ ಸಹಕರಿಸಿದ್ದಕ್ಕೆ ಕಂಪನಿ ಪ್ರತಿನಿಧಿಗಳಿಗೆ ಅಭಿನಂದನೆ ಸಲ್ಲಿಸಿದ ಜಿಲ್ಲಾಧಿಕಾರಿಗಳು, ಈ ವರ್ಷ ಸಹ ತಮ್ಮ ಸಹಕಾರ ಅಗತ್ಯ ಇದೆ ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಜಿಲ್ಲಾ ಕೈಗಾರಿಕೆ ಕೇಂದ್ರದ ಉಪನಿರ್ದೇಶಕ ಅಬ್ದುಲ್ ಅಜೀಮ್ ಸೇರಿದಂತೆ ಕಾರ್ಪೊರೇಟ್ ಕಂಪನಿಯ ಸುಮಾರು 50 ಪ್ರತಿನಿಧಿಗಳು, ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಬಸಿನಲ್ಲಿ 1 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

ಕಲಬುರಗಿ,ಅ.15-ನಗರದ ಸಿಟಿ ಬಸ್ ನಿಲ್ದಾಣದಿಂದ ರಾಮ ಮಂದಿರ ಕಡೆಗೆ ಹೋಗುತ್ತಿದ್ದ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 1 ಲಕ್ಷ ರೂ.ಮೌಲ್ಯದ 25 ಗ್ರಾಂ.ಬಂಗಾರದ ಪಟ್ಟಿ ನಾನ್ ಚೈನ್ ಮತ್ತು 500 ರೂ.ನಗದು ಕಳವಾಗಿರುವ ಘಟನೆ ನಡೆದಿದೆ. ಸೇಡಂನ ವಿಶ್ವನಗರದ ನಾಗಮ್ಮ ಸೂರ್ಯಕಾಂತ ಹೊಸಪೇಟೆ ಎಂಬುವವರೆ ಚಿನ್ನಾಭರಣ ಮತ್ತು ನಗದು ಕಳೆದುಕೊಂಡಿದ್ದು, ಅವರು ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ದಸರಾ ಹಬ್ಬದ ಪ್ರಯುಕ್ತ ನಗರದ ಸಾಯಿ ಮಂದಿರ ಹತ್ತಿರದ ನವಣೀ ಲೇಔಟನಲ್ಲಿರುವ ತವರು ಮನೆಗೆ ಹೋಗಲೆಂದು ಅವರು ಕಲಬುರಗಿಗೆ ಆಗಮಿಸಿ ನಗರದ ಸಿಟಿ ಬಸ್ ನಿಲ್ದಾಣದಿಂದ ರಾಮ ಮಂದಿರ ಕಡೆಗೆ ಹೋಗುವ ಬಸ್ ಹತ್ತಿದ್ದರು. ಈ ವೇಳೆ ಇಬ್ಬರು ಬುರ್ಖಾ ಧರಿಸಿದ್ದ ಮಹಿಳೆಯರು ಸಹ ಬಸ್ ಹತ್ತಿದ್ದು, ಅವರೇ ವ್ಯಾನಿಟಿ ಬ್ಯಾಗ್‌ನಲ್ಲಿದ್ದ ಚಿನ್ನ ಮತ್ತು ನಗದು ಕಳವು ಮಾಡಿದ್ದಾರೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಸ್ಟೇಷನ್ ಬಜಾರ್ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಬಸವಕಲ್ಯಾಣದಲ್ಲಿ ಮೂರು ದಿನಗಳ 23ನೇ ಕಲ್ಯಾಣ ಪರ್ವ




ಕಲಬುರಗಿ: ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಇದೇ ಅಕ್ಟೋಬರ್ 18,19 ಮತ್ತು 20ರಂದು ಒಟ್ಟು ಮೂರು ದಿನಗಳ ಕಾಲ 23ನೇ ಕಲ್ಯಾಣ ಪರ್ವ ಹಮ್ಮಿಕೊಳ್ಳಲಾಗಿದೆ ಎಂದು ರಾಷ್ಟ್ರೀಯ ಬಸವದಳದ ಜಿಲ್ಲಾಧ್ಯಕ್ಷ ಆರ್.ಜಿ. ಶೆಟಗಾರ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸವಕಲ್ಯಾಣದಲ್ಲಿ ಅನುಭವ ಮಂಟಪ ಸ್ಥಾಪಿಸಿ 770 ಅಮರಗಣಂಗಳು ಮತ್ತು ಒಂದು ಲಕ್ಷ ತೊಂಬತ್ತಾರು ಸಾವಿರ ಶರಣರು ಜೊತೆಗೂಡಿ ವಚನ ಸಾಹಿತ್ಯವನ್ನು ರಚಿಸಿರುವ ಪವಿತ್ರ ಸ್ಥಳದಲ್ಲಿ ಕಲ್ಯಾಣ ಕ್ರಾಂತಿ ಪೂರ್ವದಲ್ಲಿ ಗಣಮೇಳ, ಗಣಭೋಜನ, ಆಚರಿಸುತ್ತಿದ್ದರು. ಕಲ್ಯಾಣ ಕ್ರಾಂತಿ ನಂತರ ನಿಂತು ಹೋಗಿರುವ ಗಣಮೇಳ ಕಲ್ಯಾಣ ಪರ್ವ ಮತ್ತೆ 21ನೇ ಶತಮಾನದಲ್ಲಿ ಶರಣರ ಜೀವನ ಸಾಧನೆ ಉದ್ದೇಶ ಸಾರುವ ಉದ್ದೇಶದಿಂದ ಲಿಂಗೈಕ್ಯ ಜಗದ್ಗುರು ಮಾತೆ ಮಹಾದೇವಿಯವರು 2002ರಲ್ಲಿ ಪ್ರಾರಂಭಿಸಿದ್ದಾರೆ ಎಂದರು. ಇಲ್ಲಿಯವರೆಗೆ 22 ಕಲ್ಯಾಣ ಪರ್ವ ಯಶಸ್ವಿಯಾಗಿ ಜರುಗಿವೆ. ಇದು 33ನೇ ಸಮಾವೇಶವಾಗಿದೆ. ಕೂಡಲ ಸಂಗಮ ಬಸವ ಧರ್ಮ ಪೀಠದ ಜಗದ್ಗುರು ಮಾತೆ ಗಂಗಾದೇವಿ ಅವರು ದಿವ್ಯ ನೇತೃತ್ವ ವಹಿಸುವರು. ಅಕ್ಟೋಬರ್ 18ರಂದು ಧರ್ಮಚಿಂತನ ಗೋಷ್ಠಿ, ಮಹಿಳಾ ಗೋಷ್ಠಿ, 19ರಂದು ಶರಣ ವಂದನೆ, ಪೀಠಾರೋಹಣ, ಉದ್ಘಾಟನಾ ಸಮಾರಂಭ, ಯುವ ಗೋಷ್ಠಿ, ಧರ್ಮ ಚಿಂತನಗೋಷ್ಠಿ-2, 20ರಂದು ಭಾನುವಾರ ಬೆಳಿಗ್ಗೆ ವಿಶ್ವಗುರು ಬಸವಣ್ಣನವರ ಭಾವಚಿತ್ರ ಹಾಗೂ ವಚನ ಸಾಹಿತ್ಯದ ಭವ್ಯ ಮೆರವಣಿಗೆ ಜರುಗಲಿದೆ ಎಂದು ಅವರು ಹೇಳಿದರು. ಕಲ್ಯಾಣ ಪರ್ವ ಕಾರ್ಯಕ್ರಮದಲ್ಲಿ ಸಚಿವರು, ಸಂಸದರು, ಶಾಸಕರು, ವಿದ್ವಾಂಸರು ಹಾಗೂ ಕರ್ನಾಟಕದ ಎಲ್ಲ ಜಿಲ್ಲೆಗಳಿಂದ ಮತ್ತು ಆಂಧ್ರ, ತೆಲಂಗಾಣ, ತಮಿಳ್ನಾಡು, ಮಹಾರಾಷ್ಟ್ರ ರಾಜ್ಯಗಳಿಂದ ಪ್ರತಿನಿಧಿಗಳು ಸಹಸ್ರ, ಸಹಸ್ರ ಸಂಖ್ಯೆಯಲ್ಲಿ ಪಾಲ್ಗೊಳ್ಳುವರು ಎಂದು ಅವರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ರೇವಣಸಿದ್ದಪ್ಪ ಕೆ. ಹೆಗಣೆ, ಶಾಂತಪ್ಪ ಪಾಟೀಲ್, ಸಂಗಮೇಶ್ ಗುಬ್ಬೇವಾಡ್, ಸಿದ್ರಾಮಪ್ಪಾ ಎಸ್. ಲದ್ದೆ ಮುಂತಾದವರು ಉಪಸ್ಥಿತರಿದ್ದರು.

## ಮನೆ ಬೀಗ ಮುರಿದು 3.73 ಲಕ್ಷ ರೂ.ನಗದುಹಣ ಕಳವು

ಕಲಬುರಗಿ :ಮನೆ ಬೀಗ ಮುರಿದು ಅಲಮಾರಿಯಲ್ಲಿದ್ದ 3.73 ಲಕ್ಷ ರೂ.ಮೌಲ್ಯದ ನಗದು ಹಣ ಕಳವು ಮಾಡಿರುವ ಘಟನೆ ಇಲ್ಲಿನ ರೆಹಮತ್ ನಗರದಲ್ಲಿ ನಡೆದಿದೆ. ನೂರುಲ್ಲಾ ಶೇಖ್ ಎಂಬುವವರು ಈ ಸಂಬಂಧ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ಸಂಬಂಧಿಕರ ಮದುವೆ ಇದ್ದ ಪ್ರಯುಕ್ತ ನೂರುಲ್ಲಾ ಅವರ ಪತ್ನಿ ಮಕ್ಕಳನ್ನು ಕರೆದುಕೊಮಡು ಬೆಳಗಾವಿಗೆ ಹೋಗಿದ್ದರು. ನೂರುಲ್ಲಾ ಅವರು ಕೆಲಸದ ಪ್ರಯುಕ್ತ ಪುನಾಕ್ಕೆ ಹೋಗಿದ್ದರು. ಮನೆಯಲ್ಲಿ ಯಾರೂ ಇಲ್ಲದ ಸಮಯ ಸಾಧಿಸಿ ಕಳ್ಳರು ಮನೆ ಬೀಗ ಮುರಿದು ಹಣ ದೋಚಿಕೊಂಡು ಹೋಗಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ತೇಗಲತಿಪ್ಪಿಗೆ ಶ್ರೀ ಗುರು ಸೇವಾರತ್ನ ಪ್ರಶಸ್ತಿಗೆ



ಕಲಬುರಗಿ: ಹಾರಕೂಡದ ಶ್ರೀ ಚನ್ನಬಸವೇಶ್ವರ ಸಂಸ್ಥಾನ ಹಿರೇಮಠದ ವತಿಯಿಂದ ಕೊಡಮಾಡುವ ಶ್ರೀ ಗುರು ಸೇವಾರತ್ನ ಪ್ರಶಸ್ತಿಗೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಅವರು ಸೇರಿದಂತೆ ಅನೇಕ ಸಾಮಾಜಿಕ ಚಿಂತಕರನ್ನು ಆಯ್ಕೆ ಮಾಡಲಾಗಿದೆ ಎಂದು ಹಾರಕೂಡ ಶ್ರೀಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕನ್ನಡವನ್ನು ಉಳಿಸಿ ಬೆಳೆಸುವಲ್ಲಿ ಕಳೆದ ಇಪ್ಪತ್ತೈದು ವರ್ಷಗಳಿಂದ ತಮ್ಮ ಸಾರಥ್ಯದ ಸಂಸ್ಥಾಪಿತ ವಿಶ್ವಜ್ಯೋತಿ ಪ್ರತಿಷ್ಠಾನ ಹಾಗೂ ಕರ್ನಾಟಕ ವಚನ ಸಾಹಿತ್ಯ ಅಕಾಡೆಮಿಗಳ ಅವಿರತವಾಗಿ ಶ್ರಮಿಸಿ, ಪ್ರಸ್ತುತ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಆಯ್ಕೆಗೊಂಡು ನಿರಂತರವಾಗಿ ಕನ್ನಡ ಕಟ್ಟುವ ಕಾಯಕದಲ್ಲಿ ನಿರತರಾಗಿದ್ದಾರೆ. ಕನ್ನಡವೇ ತಮ್ಮ ಉಸಿರಾಗಿಸಿಕೊಂಡು ನಿತ್ಯ ನೂತನ ಕಾರ್ಯಕ್ರಮಗಳನ್ನು ಆಯೋಜಿಸಿ ಈ ಭಾಗದ ಸಾಹಿತ್ಯಾಸಕ್ತರಿಂದಲೂ ಸೈ ಎನಿಸಿಕೊಂಡಿದ್ದಾರೆ. ಅ.24 ರಂದು ಬೆಳಗ್ಗೆ 11 ಗಂಟೆಗೆ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ ಸಮಾರಂಭದಲ್ಲಿ ಶ್ರೀ ಡಾ. ಚೆನ್ನವೀರ ಶಿವಾಚಾರ್ಯರು ಇವರ ದಿವ್ಯ ಸಾನಿಧ್ಯದಲ್ಲಿ ಅನೇಲ ಗಣ್ಯಾತಿ ಗಣ್ಯರು ಸೇರಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

## ರಾಷ್ಟ್ರಕ್ಕೆ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಕೊಡುಗೆ ಅಪಾರ



ಕಲಬುರಗಿ: ವಿಜ್ಞಾನಿಯಾಗಿ, ರಾಷ್ಟ್ರಪತಿಂಯಾಗಿಂಯಾಗಿ, ತತ್ವಜ್ಞಾನಿಯಾಗಿ, ಶಿಕ್ಷಣ ತಜ್ಞರಾಗಿ, ಕ್ಷಿಪಣಿಯ ರೂವಾರಿಯಾಗಿ, ಧೀಮಂತ ಧುರಿಣರಾಗಿ, ಯುವ ಜನತೆಯ ದಾರಿದೀಪವಾಗಿ, ರಾಷ್ಟ್ರದ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸಿರುವ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಕೊಡುಗೆ ಪಾರವಾಗಿದೆ ಎಂದು ಆರ್.ಜೆ ಪಿಯು ಕಾಲೇಜಿನ ಪ್ರಾಚಾರ್ಯ ಡಾ.ಪ್ರಹ್ಲಾದ್ ಬುರ್ಲಿ ಅಭಿಮತಪಟ್ಟರು. ನಗರದ ಹೊಸ ಜೇವರ್ಗಿ ರಸ್ತೆಯಲ್ಲಿನ 'ಗೆಟ್ಸ್ ವಿಜ್ಞಾನ ಮತ್ತು ವಾಣಿಜ್ಯ ಪದವಿ ಕಾಲೇಜ್'ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಮಂಗಳವಾರ ಜರುಗಿದ 'ಡಾ.ಎ.ಪಿ.ಜೆ.ಅಬ್ದುಲ್ ಕಲಾಂರ 93ನೇ ಜನ್ಮದಿನ-ವಿಶ್ವ ವಿದ್ಯಾರ್ಥಿಗಳ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಕಲಾಂ ಅವರಂತಹ ಮೇರು ವ್ಯಕ್ತಿತ್ವ ಹೊಂದಿದವರು ವಿರಳ. ಅವರಲ್ಲಿರುವ ದೇಶದ ಅಭಿವೃದ್ಧಿಯ ತುಡಿತ ನಮ್ಮೆಲ್ಲರಿಗೆ ಸದಾ ಮಾದರಿಯಾಗಿದೆ. ವಿದ್ಯಾರ್ಥಿಗಳ ಬಗ್ಗೆಯಿದ್ದ ಅವರ ಕಾಳಜಿಯಿಂದ ಅವರ ಜನ್ಮದಿನವನ್ನು'ವಿಶ್ವವಿದ್ಯಾರ್ಥಿಗಳ ದಿನಾಚರಣೆ'ಯನ್ನಾಗಿ ಆಚರಿಸುವ ಮೂಲಕ ಇಡೀ ವಿದ್ಯಾರ್ಥಿ ಸಮುದಾಯಕ್ಕೂ ಕೂಡಾ ಗೌರವ ನೀಡಿದಂತಾಗಲು ಕಲಾಂ ಅವರೇ ಕಾರಣರಾಗಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ಎಚ್.ಬಿ.ಕಂಟೆಗೋಳ್, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಸಕ್ಸಸ್ ಕಂಪ್ಯೂಟರ ತರಬೇತಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಶರಣಬಸವೇಶ್ವರ ಪದವಿ ಕಾಲೇಜಿನ ಉಪನ್ಯಾಸಕ ಕಲ್ಯಾಣರಾವ ಪಾಟೀಲ, ಕಾಲೇಜಿನ ಉಪನ್ಯಾಸಕರಾದ ಶಿವಲಿಂಗಪ್ಪ ತಳವಾರ, ಅಶ್ವಿನಿ ಪಾಟೀಲ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ವಿದ್ಯಾರ್ಥಿ ಮಲ್ಲಿಕಾರ್ಜುನ ನಿರೂಪಿಸಿ, ವಂದಿಸಿದನು.

## ಜಿಲ್ಲಾಧಿಕಾರಿಗಳಿಂದ ಅಸ್ಪತ್ರೆಗಳಿಗೆ ಭೇಟಿ, ಸ್ವಚ್ಛತೆ ಕಾಪಾಡಲು ಸೂಚನೆ



ಕಲಬುರಗಿ: ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಮಂಗಳವಾರ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಅವರೊಂದಿಗೆ ಜಿಲ್ಲೆಯ ವಿವಿಧ ಆರೋಗ್ಯ ಕೇಂದ್ರ, ತಾಲೂಕಾ ಆಸ್ಪತ್ರೆಗಳಿಗೆ ಭೇಟಿ ನೀಡಿ ರೋಗಿಗಳಿಗೆ ನೀಡಲಾಗುತ್ತಿರುವ ವೈದ್ಯ ಉಪಚಾರ ಪರಿಶೀಲಿಸಿದಲ್ಲದೆ ಆಸ್ಪತ್ರೆಯಲ್ಲಿ ಸ್ವಚ್ಛತೆ ಕಾಪಾಡುವಂತೆ ಮತ್ತು ರೋಗಿಗಳಿಗೆ ಸರಿಯಾಗಿ ಉಪಚರಿಸುವಂತೆ ವೈದ್ಯ ಸಿಬ್ಬಂದಿಗಳಿಗೆ ಸೂಚಿಸಿದರು.

ಮೊದಲಿಗೆ ಕಲಬುರಗಿ ತಾಲೂಕಿನ ನಂದೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಡಿ.ಸಿ ಅವರು, ಹೆರಿಗೆಗೆಂದು ಬರುವ ಗರ್ಭಿಣಿ ಮಹಿಳೆಯರಿಗೆ ಸರಿಯಾದ ರೀತಿಯಲ್ಲಿ ಚಿಕಿತ್ಸೆ ನೀಡಬೇಕು. ಅನಗತ್ಯ ಜಿಲ್ಲಾ ಆಸ್ಪತ್ರೆಗೆ ಕಳುಹಿಸುವ ಬದಲು ಇಲ್ಲಿಯೆ ಹೆರಿಗೆ ಮಾಡಬೇಕು. ದಾಖಲೆ ಎಲ್ಲವು ಸರಿಯಾಗಿಟ್ಟುಕೊಳ್ಳಬೇಕೆಂದು ಆರೋಗ್ಯ ಕೇಂದ್ರದ ಸಿಬ್ಬಂದಿಗಳಿಗೆ ನಿರ್ದೇಶನ ನೀಡಿದರು. ಶಹಾಬಾದ ಸಮುದಾಯ ಆರೋಗ್ಯ ಕೇಂದ್ರಕ್ಕೂ ಡಿ.ಸಿ ಅವರು ಭೇಟಿ ನೀಡಿ ಪರಿಶೀಲಿಸಿದರು. ಇಲ್ಲಿ ವೈದ್ಯರು ಸರಿಯಾಗಿ ಬರಲ್ಲ. ರಾತ್ರಿ ಹೊತ್ತಿನಲ್ಲಿ ಸಿಬ್ಬಂದಿ ಇಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ತುಂಬಾ ಸಮಸ್ಯೆಯಾಗುತ್ತಿದೆ ಎಂದು ಸ್ಥಳೀಯರು ಡಿ.ಸಿ.ಗಮನಕ್ಕೆ ತಂದರು. ಈ ಕೂಡಲೆ ಸಮಸ್ಯೆ ಬಗೆಹರಿಸುವುದಾಗಿ ಹೇಳಿ ಕರ್ತವ್ಯದಲ್ಲಿ ನಿರ್ಲಕ್ಷ್ಯತೆ ತೋರುವ ವೈದ್ಯ ಸಿಬ್ಬಂದಿಗಳಿಗೆ ನೋಟಿಸ್ ಜಾರಿಗೊಳಿಸುವಂತೆ ಡಿ.ಎಚ್.ಓ ಡಾ.ಶರಣಬಸಪ್ಪ ಖ್ಯಾತನಾಳ ಅವರಿಗೆ ಡಿ.ಸಿ. ಸೂಚನೆ ನೀಡಿದರು. ನಂತರ ಹಳೇ ಶಹಾಬಾದಿನಲ್ಲಿರುವ "ನಮ್ಮ ಕ್ಲಿನಿಕ್" ಗೂ ಭೇಟಿ ನೀಡಿ ಅಲ್ಲಿನ ಕಾರ್ಯವೈಖರಿ ಪರಿಶೀಲಿಸಿದರು.

**ಅಪೌಷ್ಟಿಕತೆಯಿಂದ ಬಳಲುತ್ತಿದ್ದ ಮಗುವನ್ನು ಎತ್ತಾಡಿಸಿದ ಡಿ.ಸಿ.:**

ಚಿತ್ತಾಪುರ ತಾಲೂಕಾ ಆಸ್ಪತ್ರೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಅಲ್ಲಿನ ಮಕ್ಕಳ ವಿಭಾಗದ ಹಾಸಿಗೆಯಲ್ಲಿ ಆಟವಾಡುತ್ತಿದ್ದ ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿದ್ದ ಮಗುವನ್ನು ಕಂಡು ಆತನನ್ನು ಎತ್ತಿಕೊಂಡು ಆಡಿಸಿದರು. ಗರ್ಭಿಣಿ ಮಹಿಳೆಯರು, ಬಾಣಂತಿಯರಿಗೆ ಹಾಗೂ ಮಕ್ಕಳಿಗೆ ಸರಿಯಾಗಿ ನೋಡಿಕೊಳ್ಳಬೇಕು ಎಂದು ವೈದ್ಯರಿಗೆ ಸೂಚಿಸಿದರು. ನಂತರ ತಾಲೂಕಿನ ದಿಗ್ಗಾಂವ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಮುಡಬೂಳ ಉಪ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಶಹಾಬಾದ ತಹಶೀಲ್ದಾರ ಜಗದೀಶ ಚೌರ್, ತಾಲೂಕಾ ಪಂಚಾಯತ್ ಇ.ಓ ಮಲ್ಲಿನಾಥ ರಾವೂರ, ಚಿತ್ತಾಪುರ ತಹಶೀಲ್ದಾರ ನಾಗಯ್ಯ ಹಿರೇಮಠ, ತಾಲೂಕಾ ಪಂಚಾಯತ್ ಇ.ಓ ಅಕ್ರಂ ಪಾಶಾ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.

**ಭವನ ಕಾಮಗಾರಿ ಬೇಗ ಪೂರ್ಣಗೊಳಿಸಿ:**

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಆರೋಗ್ಯ ಸಂಸ್ಥೆಗಳಿಗೆ ಭೇಟಿ ನೀಡುವ ಮುನ್ನ ಬೆಳಿಗ್ಗೆ ಕಲಬುರಗಿ ಮಗರದ ಸೇಡಂ ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೆತ್ತಿಕೊಂಡಿರುವ ನಿರ್ಮಾಣದ ಹಂತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನ ಮತ್ತು ಶಹಾಬಾದ ರಸ್ತೆಯಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರ ಭವನ ಕಾಮಗಾರಿ ವೀಕ್ಷಿಸಿ ಕೂಡಲೆ ಕಾಮಗಾರಿ ಪೂರ್ಣಗೊಳಿಸುವಂತೆ ಪಿ.ಡಬ್ಲ್ಯೂ.ಡಿ. ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತ ಸುಭಾಷ್ ಅವರಿಗೆ ನಿರ್ದೇಶನ ನೀಡಿದರು.

## ಸರಿಯಾದ ಅಧ್ಯಯನ ಇಲ್ಲದೆ ಪರಿಶಿಷ್ಟರ ಮೀಸಲಾತಿ ವರ್ಗೀಕರಿಸಬಾರದೆಂದು ಒತ್ತಾಯಿಸಿ ಗೋರ ಸೇನಾ ಜಿಲ್ಲಾ ಸಂಘಟನೆಯಿಂದ ಡಿಸಿ ಗಳ ಮೂಲಕ ಸರಕಾರಕ್ಕೆ ಮನವಿ



ಕಲಬುರಗಿ: ರಾಜ್ಯ ಸರ್ಕಾರವು ಸರಿಯಾದ ಅಧ್ಯಯನ ಇಲ್ಲದೆ ಪರಿಶಿಷ್ಟರ ಮೀಸಲಾತಿಯನ್ನು ವರ್ಗೀಕರಿಸಬಾರದೆಂದು ಒತ್ತಾಯಿಸಿ ಗೋರ ಸೇನಾ ಜಿಲ್ಲಾ ಸಂಘಟನೆಯಿಂದ ಜಿಲ್ಲಾಧಿಕಾರಿಗಳ ಮೂಲಕ ಸರಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಕರ್ನಾಟಕ ರಾಜ್ಯದ ಬಂಜಾರಾ ಸಮುದಾಯಕ್ಕೆ ಮಾರಕವಾಗಿ ಕಾಡುತ್ತಿರುವ ಒಳಮೀಸಲಾತಿ ಮತ್ತು ವರ್ಗೀಕರಣ ವನ್ನ ವಿರೋಧಿಸಿ, "ಗೋರ್ ಸೇನಾ' ರಾಷ್ಟ್ರೀಯ ಸಂಘಟನೆ, ಕರ್ನಾಟಕ ರಾಜ್ಯ ಘಟಕ, ಇಂದು ದಿನಾಂಕ 02 ಅಕ್ಟೋಬರ್ 2024 ರಂದು ಬೆಂಗಳೂರಿನ' ಫ್ರೀಡಂ ಪಾರ್ಕ್ ನಲ್ಲಿ. ರಾಷ್ಟ್ರಪಿತ ಮಹಾತ್ಮ ಗಾಂಧಿ ರವರ 155 ನೇ ಜಯಂತಿಯ ಸಂದರ್ಭದಲ್ಲಿ, ' ಬಾಬಾಸಾಹೇಬ್ ಡಾ. ಭೀಮರಾವ್ ಅಂಬೇಡ್ಕರ್ ರವರು ಸಂವಿಧಾನಾತ್ಮಕವಾಗಿ ನೀಡಿರುವ ಮೀಸಲಾತಿಯನ್ನು ಅಸಂವಿಧೀನಾತ್ಮಕ ಮತ್ತು ಅವೈಜ್ಞಾನಿಕ ವಾಗಿ ವರ್ಗೀಕರಣ ಮಾಡಬಾರದಾಗಿ ಸರ್ಕಾರವನ್ನು ಒತ್ತಾಯಿಸಿ ಒಂದು ದಿನದ ಸತ್ಯಾಗ್ರಹ ವನ್ನ ಸಾಂಕೇತಿಕವಾಗಿ ನೆರವೇರಿರುತ್ತದೆ. ಸತ್ಯಾಗ್ರಹಕ್ಕೆ ಕರ್ನಾಟಕ ರಾಜ್ಯದ ಬೀದರ್, ಗುಲ್ಬರ್ಗ, ಯಾದಗಿರಿ, ಶಿವಮೊಗ್ಗ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ, ಹಾವೇರಿ, ಬಿಜಾಪುರ, ದಾವಣಗೆರೆ, ತುಮಕೂರು, ಚಿಕ್ಕಮಗಳೂರು, ಚಾಮರಾಜನಗರ, ಮೈಸೂರು ಮತ್ತು ಬೆಂಗಳೂರು ನಗರ ಜಿಲ್ಲೆಗಳಿಂದ ನೂರಾರು 'ಗೋರ್ ಸೇನಾ' ಕಾರ್ಯಕರ್ತರು ಮತ್ತು ಸ್ವಾಭಿಮಾನಿ ಗೋರ್ ಬಂಜಾರಾ ಜನಾಂಗದ ಹಿತ ಚಿಂತಕರು ಭಾಗವಹಿಸಿರುತ್ತಾರೆ. ರಾಜ್ಯ ಸರ್ಕಾರವು ' ಸರಿಯಾದ ಅಧ್ಯಯನ ಇಲ್ಲದೆ ಪರಿಶಿಷ್ಟರ ಮೀಸಲಾತಿಯನ್ನು ವರ್ಗೀಕರಿಸಬಾರದೆಂದು ಒತ್ತಾಯಿಸಿ ಸತ್ಯಾಗ್ರಹವನ್ನು ಗೋರ್ ಸೇನಾ ಕರ್ಣಾಟ ರಾಜ್ಯ ಘಟಕ ಹಮ್ಮಿಕೊಂಡಿರುತ್ತದೆ. ಗೋರ್ ಸೇನಾ, ಕರ್ನಾಟಕ ರಾಜ್ಯ ಘಟಕ, ರಾಜ್ಯ ಸರ್ಕಾರವನ್ನು ಸತ್ಯಾಗ್ರಹದ ಮೂಲಕ ವಿನಂತಿಸಿಕೊ0ಡಿರುವುದೇನಂದರೆ, ಮೀಸಲಾತಿ ವರ್ಗೀಕರಣ, ರಾಜ್ಯದಲ್ಲಿ ಇರುವ ಎಲ್ಲ ಸಮುದಾಯಗಳ ಸರಿಯಾದ ಅಧ್ಯಯನ ಇಲ್ಲದೆ ಮತ್ತು ವೈಜ್ಞಾನಿಕವಾಗಿ ದತ್ತಾಂಶವನ್ನು ಸಂಗ್ರಹಿಸದೆ ತರಾತುರಿಯಲ್ಲಿ ಮಾಡಕೂಡದು. ವೈಜ್ಞಾನಿಕವಾಗಿ ಸಂಗ್ರಹಿಸಿದ ದತ್ತಾಂಶದ ಆಧಾರದಲ್ಲೇ ಪರಿಶಿಷ್ಟರ ಹಿಂದುಳಿದಿರುವಿಕೆಯನ್ನು ಗುರುತಿಸಬೇಕು,

ಪರಿಶಿಷ್ಟರ ಜಾತಿಪಟ್ಟಿ ಯಲ್ಲಿರುವ ವಿವಿಧ ಸಮುದಾಯಗಳ ಜನರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ದೊರಕಿರುವ ಅವಕಾಶಗಳು, ಆರ್ಥಿಕ ಸ್ಥಿತಗಳು, ರಾಜಕೀಯ ಸ್ಥಾನಮಾನ ಮತ್ತು ಸಾಮಾಜಿಕ ವ್ಯವಸ್ಥೆಯ ನಿಖರ ಅಂಕಿ ಅಂಶಗಳನ್ನು ಒಳಗೊಂಡ ದತ್ತಾಂಶವನ್ನು ಆಧರಿಸಿಯೇ ಒಳಮಿಸಲು ಹಂಚಿಕೆ ನಿರ್ಧಾರ ಕೈಗೆತ್ತಿಕೊಳ್ಳಬೇಕು, ಬಂಜಾರಾ ಸಮುದಾಯದ ಜನರ ಶಿಕ್ಷಣ ಮತ್ತು ಉದ್ಯೋಗದಲ್ಲಿ ದೊರಕಿರುವ ಅವಕಾಶಗಳು, ಆರ್ಥಿಕ ಸ್ಥಿತಗಳು, ರಾಜಕೀಯಸ್ಥಾನಮಾನ ಮತ್ತು ಸಾಮಾಜಿಕ ವ್ಯವಸ್ಥೆಯ ನಿಖರ ಅಂಕಿ ಅಂಶಗಳನ್ನು ಒಳಗೊಂಡ ದತ್ತಾಂಶವನ್ನು ಪ್ರತ್ಯೇಕವಾಗಿ ಪರಿಗಣಿಸಬೇಕು,

2011ರ ನಂತರ ಜನಗಣತಿ ನಡೆದಿರುವುದಿಲ್ಲ. ಜನಸಂಖ್ಯಾ ಮಾಹಿತಿ ಇಲ್ಲದೆ ಮತ್ತು ಜಾತಿ ಜನಗಣತಿ ಆಗದೆ ಒಳಮೀಸಲಾತಿ ಮತ್ತು ವರ್ಗೀಕರಣದ ವಿಚಾರ ಅಥವಾ ಪ್ರಯತ್ನ ಸಮಂಜಸವಾಗಿರುವುದಿಲ್ಲ. ಈ ತಪ್ಪನ್ನ ರಾಜ್ಯ ಸರ್ಕಾರ ಮಾಡಕೂಡದು,

ಬಂಜಾರಾ ಜನಾಂಗದಲ್ಲಿ 'ಗೂಳೆ ಹೋಗುವುದು ' ಒಂದು ಪಿಡಗಾಗಿದ್ದು . ರಾಜ್ಯ ಸರ್ಕಾರವು ರಾಜ್ಯದಲ್ಲಿ ಇರುವ ಎಲ್ಲ ಬಂಜಾರಾ ಜನಾಂಗದ ಜನಗಣತಿಯನ್ನು ಅಚ್ಚುಕಟ್ಟಾಗಿ ಮತ್ತು ಅತಿ ಹೆಚ್ಚಿನ ಕಾಳಜಿವಹಿಸಿ ನಡೆಸಬೇಕು ಮತ್ತು ಅದರ ದತ್ತಾಂಶವನ್ನು ಯಾವುದೇ ಲೋಪವಿಲ್ಲದೆ ಪಾರದರ್ಶಕವಾಗಿ ಬಹಿರಂಗಗೊಳಿಸಬೇಕು,

ಮೀಸಲಾತಿ, ಒಳಮೀಸಲಾತಿ ಮತ್ತು ವರ್ಗೀಕರಣದ ಅಧ್ಯಯನ ಪರಿಶಿಷ್ಟರ ನಡುವೆ ಇರುವ ಐಕ್ಯತೆ ಗೆ ಯಾವುದೇ ಧಕ್ಕೆ ತರಬಾರದು. ಎಲ್ಲ ಪರಿಶಿಷ್ಟರ ಹಿತವನ್ನ ಕಾಪಾಡಲು ಸರ್ಕಾರ ಸರಿಯಾದ ಕ್ರಮ ವಹಿಸಬೇಕು. ಪರಿಶಿಷ್ಟ ಸಮುದಾಯಗಳ ನಡುವೆ ಒಳಮಿಸಲಾತಿ ಮತ್ತು ವರ್ಗೀಕರಣದ ವಿಷಯಗಳಲ್ಲಿ ಹುಟ್ಟುತ್ತಿರುವ ಭಿನ್ನಾಭಿಪ್ರಾಯಗಳನ್ನು ಸರಿಪಡಿಸಲು ಮತ್ತು ಸಮುದಾಯಗಳ ನಡುವೆ ಯಾವುದೇ ದ್ವೇಷ ಭಾವನೆ ಹುಟ್ಟದೇ ಇರುವ ಹಾಗೆ ರಾಜ್ಯ ಸರ್ಕಾರ ಸರಿಯಾದ ನಿರ್ಧಾರವನ್ನ ತೆಗೆದುಕೊಳ್ಳಬೇಕು.

ಗೋರ ಬಂಜಾರಾ ಸಮುದಾಯವು ರಾಜ್ಯದಲ್ಲಿ ಆರ್ಥಿಕವಾಗಿ, ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ದುರ್ಬಲ ಸಮುದಾಯ ಆಗಿದ್ದು, ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳನ್ನೊಳಗೊಂಡ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಹುತೇಕ ಹೆಚ್ಚಾಗಿರುವ ಈ ಗೋರ ಬಂಜಾರಾ ಜನರ ಪರಿಸ್ಥಿತಿ ಇನ್ನೂ ಹೀನಾಯ ಸ್ಥಿತಿಯಲ್ಲಿದೆ. ಈ ಭಾಗದ ಗೋರ ಬಂಜಾರಾ ಜನಾಂಗದ ಒಳತಿಗಾಗಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕ ' ಕರ್ನಾಟಕ ತಾಂಡಾ ನಿಗಮ ' ಸ್ಥಾಪಿಸಬೇಕು ಮತ್ತು ಈಗಾಗಲೇ ಇರುವ ತಾಂಡಾ ನಿಗಮಕ್ಕೆ ಹೆಚ್ಚಿನ ಅನುದಾನವನ್ನು ನೀಡಬೇಕು, ಖಾಸಗಿ ವಲಯದಲ್ಲಿ ಮೀಸಲಾತಿ ಜಾರಿಗೊಳಿಸಲು ತಂದ ಮಸೂದೆಯನ್ನು ರಾಜ್ಯ ಸರ್ಕಾರ ಅಂಗೀಕರಿಸಬೇಕೆಂದು.

ಕರ್ನಾಟಕ ರಾಜ್ಯದಲ್ಲಿರುವ ಸುಮಾರು 3500 ತಾಂಡಾಗಳಲ್ಲಿಯೂ ಇರುವ ಗೋರ ಬಂಜಾರಾ ಜನರ ಆರಾಧ್ಯ ದೈವಗಳಾದ ಮಾತಾ ಮರಿಯಮ್ಮ ಮತ್ತು ಸತಗುರು ಸೇವಾಲಾಲ ಮಹಾರಾಜರ ದೇವಸ್ಥಾನದಲ್ಲಿ ವಂಶಪಾರಂಪರ್ಯವಾಗಿ ಪೂಜಾ ದೈವಕಾರ್ಯವನ್ನು ಸರ್ವ ತಾಂಡಾವಾಸಿಗಳ ಸಹಾಯದಿಂದ, ಹಾಗೂ ಕೆಲವೊಂದು ತಾಂಡಾಗಳಲ್ಲಿ ಸ್ವಯಂ ಖರ್ಚು ಮಾಡಿಕೊಂಡು ಬರುತ್ತಿರುವ ಭೋಪ್ಯಾ-ಭಗತ ಅಂದರೆ ಗೋರ ಬಂಜಾರಾ ಕುಲದೈವಗಳ ಪೂಜಾರಿಗಳನ್ನು ಗುರುತಿಸಿ ಮುಜರಾಯಿ ಇಲಾಖೆವತಿಯಿಂದ ಗುರುತಿಸಿ ಅವರಿಗೆ ಮಾಸಿಕ। ವೇತನವನ್ನು ರಾಜ್ಯ ಸರ್ಕಾರವು ನಿಗದಿಪಡಿಸಿ, ನಮ್ಮ ರಾಜ್ಯ ಅಷ್ಟೇ ಅಲ್ಲ ದೇಶ ಹಾಗೂ ವಿಶ್ವವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಗೋರ ಬಂಜಾರಾ ಜನರ ವಿಶೇಷ ಬುಡಕಟ್ಟು ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ರಾಜ್ಯ ಸರ್ಕಾರವು ದಿಟ್ಟ ಹಾಗೂ ಮಾದರಿ ಹೆಜ್ಜೆ ಇಡಬೇಕೆಂದು ಸಹ ಗೋರಸೇನಾ ಸಂಘಟನೆಯ ರಾಜ್ಯ ಘಟಕ ಒತ್ತಾಯಿಸುತ್ತಿದ್ದು, ರಾಜ್ಯದಲ್ಲಿ ಗೋರ ಪರಂಪರೆ ಸಂಸ್ಕೃತಿಯ ಉಳಿವಿಗಾಗಿ ಹಗಲಿರುಳು ಶ್ರಮಿಸುತ್ತಿರವ ನಮ್ಮ ಸಂಘಟನೆ ಈ ವಿಷಯದಲ್ಲಿ ಸರ್ಕಾರವು ತೆಗೆದುಕೊಳ್ಳಬಹುದಾದ ತೀರ್ಮಾನಕ್ಕೆ ಸಹಕಾರಿಯಾಗಿ ಪೂರಕವಾಗಿ (ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಭಾಗಿಯಾದಂತೆ) ಕಾರ್ಯನಿರ್ವಹಿಸಲು ಸಿದ್ಧವಿದೆ ಎಂದು ತಿಳಿಸಲು ಹರ್ಷಿಸುತ್ತೇವೆ.

# ಲಿಂಗತ್ವ ಅಲ್ಪ ಸಂಖ್ಯಾತರ ಹಕ್ಕುಗಳ ಜಾಗೃತಿ ಹಾಗೂ ಸ್ವಚ್ಛತಾ ಕಾರ್ಯಕ್ರಮ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ಕೇಂದ್ರ ಬಸ್ ನಿಲ್ದಾಣದ ಆವರಣದಲ್ಲಿ ಬುಧವಾರ ವಿಜಯಪುರ ಕಕರಸಾ ನಿಗಮದಿಂದ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯಕ್ಕೆ ಶಕ್ತಿ ಯೋಜನೆಯಡಿಯಲ್ಲಿ ಉಚಿತವಾಗಿ ಪ್ರಯಾಣ ಮಾಡುವ ಕುರಿತು ಚಾಲಕ, ನಿರ್ವಾಹಕರಿಗೆ ಹಾಗೂ ಸಾರ್ವಜನಿಕರಿಗೆ ಜಾಗೃತಿ ಕಾರ್ಯಕ್ರಮ ಹಾಗೂ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರಬರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.

ಸಾರಿಗೆ ಅಧಿಕಾರಿ ಡಿ.ಎ.ಬಿರಾದಾರ, ಸಹಾಯಕ ಸಂಚಾರ ವ್ಯವಸ್ಥಾಪಕರಾದ ಜೆ.ಕೆ. ಹುಗ್ಗೆಣ್ಣವರ, ಕೇಂದ್ರ ಬಸ್ ನಿಲ್ದಾಣ ವಿಜಯಪುರ ವಿಭಾಗದ ಸಿಬ್ಬಂದಿ ವರ್ಗದವರು ಹಾಗೂ ನವಸ್ಫೂರ್ತಿ ಸಂಘದ ಪದಾಧಿಕಾರಿಗಳು ಹಾಜರಿದ್ದರು.

## ನವದೆಹಲಿಯ ಕರ್ನಾಟಕ ವಾರ್ತಾ ಕೇಂದ್ರ್ರದ ವಾಹನ ಚಾಲಕರಾದ ವಿಜಯಕುಮಾರ್ ತೋರಗಲ್ ಅವರಿಗೆ ಆತ್ಮೀಯ ಬೀಳ್ಕೊಡುಗೆ

# ವಿಜಯಕುಮಾರ ತೋರಗಲ್ ಇತರ ಚಾಲಕರಿಗೆ ಮಾದರಿ



■ ಉದಯರಶ್ಮಿ ದಿನಪತ್ರಿಕೆ

ನವದೆಹಲಿ: ನವದೆಹಲಿಯ ಕರ್ನಾಟಕ ವಾರ್ತಾ ಕೇಂದ್ರ್ರದಲ್ಲಿ ಕಳೆದ 12 ವರ್ಷಗಳಿಂದ ವಾಹನ ಚಾಲಕರಾಗಿ ಕಾರ್ಯನಿರ್ವಹಿಸಿ, ಬೆಳಗಾವಿಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪ ನಿರ್ದೇಶಕರ ಕಛೇರಿಗೆ ವರ್ಗಾವಣೆ ಹೊಂದಿರುವ ವಿಜಯಕುಮಾರ ತೋರಗಲ್ ಅವರನ್ನು ಆತ್ಮೀಯವಾಗಿ ಬೀಳ್ಕೊಡಲಾಯಿತು.

ನಂ–6 ಸರ್ದಾರ ಪಟೇಲ್ ಮಾರ್ಗದಲ್ಲಿರುವ ಕರ್ನಾಟಕ ಭವನದಲ್ಲಿನ ಕರ್ನಾಟಕ ವಾರ್ತಾ ಕೇಂದ್ರ್ರದ ಕಛೇರಿಯಲ್ಲಿ ಬುಧವಾರ ನಡೆದ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಪ್ರಭಾರ ಉಪ ನಿರ್ದೇಶಕಿ ಶ್ರೀಮತಿ ಎಂ ಶಾಲಿನಿ ಅವರು ಮಾತನಾಡಿ, ವಿಜಯ್ ಕುಮಾರ್ ಅವರು ಎಲ್ಲರೊಂದಿಗೆ ಅತ್ಯಂತ ಅತ್ಮೀಯತೆ ಹೊಂದಿದ್ದು, ಸಮಯ ಪರಿಪಾಲನೆಯೊಂದಿಗೆ ಶ್ರದ್ಧೆಯಿಂದ ಕಾರ್ಯನಿರ್ವಹಿಸುವ ಮೂಲಕ ಇತರ ಚಾಲಕರಿಗೆ ಮಾದರಿಯಾಗಿದ್ದು, ಇವರ ಮುಂದಿನ ವೃತ್ತಿ ಜೀವನ ಸುಖಮಯವಾಗಿರಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಅನ್ಯ ಕರ್ತವ್ಯದ ಮೇಲೆ ನವದೆಹಲಿಯಲ್ಲಿದ್ದ ವಿಜಯಪುರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿ ಅಮರೇಶ್ ದೊಡಮನಿ, ಕರ್ನಾಟಕ ಭವನದ ಪ್ರಭಾರ ಲೆಕ್ಕಾಧೀಕ್ಷಕರಾದ ಎಸ್ ಕುಮಾರ್, ಕಿರಿಯ ಸಹಾಯಕರಾದ ರಾಜಣ್ಣ ಡಿ ಬಿರಾದಾರ, ಪ್ರಥಮ ದರ್ಜೆ ಸಹಾಯಕರಾದ ಸಂದೀಪ ಆರ್ ಹಾಗೂ ಶ್ರೀಮತಿ ರಂಜನಾ, ದ್ವಿತೀಯ ದರ್ಜೆ ಸಹಾಯಕರಾದ ವೈಭವ್ ದೇಸಾಯಿ, ಸ್ವಾಗತಕಾರರಾದ ನವೀನ್ ಕುಮಾರ್ ಮತ್ತು ಶ್ರೀಮತಿ ಕಿರಣ್, ಹಾಗೂ ಕರ್ನಾಟಕ ವಾರ್ತಾ ಕೇಂದ್ರದ ಶ್ರೀಮತಿ ಗೀತಾ ಇವರು ಉಪಸ್ಥಿತರಿದ್ದು, ವರ್ಗಾವಣೆ ಹೊಂದಿದ ವಿಜಯಕುಮಾರ ಅವರಿಗೆ ಶುಭ ಹಾರೈಸಿದರು.



# ವಿಜಯ ಜ್ಯೋತಿ ರಥಯಾತ್ರೆಗೆ ತಾಲ್ಲೂಕು ಆಡಳಿತದಿಂದ ಸ್ವಾಗತ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಕಿತ್ತೂರು ರಾಣಿ ಚೆನ್ನಮ್ಮ ಬ್ರಿಟಿಷರ ವಿರುದ್ಧ ಯುದ್ದದಲ್ಲಿ ಗೆಲುವು ಸಾಧಿಸಿದ 200 ನೇ ವಿಜಯೋತ್ಸವದ ಅಂಗವಾಗಿ ರಾಜ್ಯದ ಎಲ್ಲೆಡೆ ಸಂಚರಿಸುತ್ತಿರುವ ವಿಜಯ ಜ್ಯೋತಿ ರಥ–'ಯಾತ್ರೆಯನ್ನು ಮಂಗಳವಾರ ತಾಲ್ಲೂಕಾ ಆಡಳಿತದಿಂದ ಸ್ವಾಗತಿಸಿ ಮೆರವಣಿಗೆ ಮಾಡಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಂಡ ಐತಿಹಾಸಿಕ ಕಿತ್ತೂರು ಉತ್ಸವ –2024 ರ 200 ನೇ ವಿಜಯೋತ್ಸವದ ವಿಜಯ ಜ್ಯೋತಿ ರಥ ಯಾತ್ರೆಯು ತಾಲೂಕಿನ ಹೊನಗನಹಳ್ಳಿ ಮಂಗಮ್ಮದೇವಿ ದೇವಸ್ಥಾನದ ಬಳಿ ತಹಶೀಲ್ದಾರ ಎಸ್ ಎಸ್ ನಾಯಕಲಮಠ ವೀರರಾಣಿ ಕಿತ್ತೂರು ಚೆನ್ನಮ್ಮಾಜಿಯ ಪುತ್ಥಳಿಗೆ ಪುಷ್ಪಹಾರ ಹಾಕಿ ಪೂಜೆ ಸಲ್ಲಿಸಿ ಭವ್ಯವಾಗಿ ಸ್ವಾಗತವನ್ನು ಕೋರಿ ವಿಜಯ ಜ್ಯೋತಿ ಯಾತ್ರೆಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಂತರ ತಾಲೂಕಿನ ಗುರುಹಿರಿಯರು ಮುಖಂಡರು ವೀರಮಾತೆ ಕಿತ್ತೂರು ಚೆನ್ನಮ್ಮಳ ರಥಕ್ಕೆ ಮಾಲಾರ್ಪಣೆ ಮಾಡಿ ,ಪೂಜೆ ಸಲ್ಲಿಸಿ ಜಯ ಘೋಷ ಹಾಕಿದರು. ನಂತರ 218 ರಾಷ್ಟ್ರೀಯ ಹೆದ್ದಾರಿ ಮೂಲಕ ವಿಜಯ ಜ್ಯೋತಿ ಯಾತ್ರೆ ರಥವು ಮಲಘಾಣ ಕ್ರಾಸ್ ಬಳಿ ನಿರ್ಮಿಸಿದ ರಾಣಿ ಚೆನ್ನಮ್ಮ ಸರ್ಕಲ್ ಗೆ ಆಗಮಿಸಿತು. ಮಲಘಾಣ ಗ್ರಾಮದ ಸಾರ್ವಜನಿಕರು ರಥಕ್ಕೆ ಭವ್ಯ ಸ್ವಾಗತವನ್ನು ಕೋರಿ ಪೂಜೆ ಸಲ್ಲಿಸಿದರು.

ರೋಣಿಹಾಳ ಗ್ರಾಮದಲ್ಲಿ ವಿಜಯ ಜ್ಯೋತಿ ಯಾತ್ರೆಯ ರಥವನ್ನು ಭವ್ಯವಾಗಿ ಸ್ವಾಗತಿಸಿ ಪೂಜೆ ಸಲ್ಲಿಸಿದರು.

ನಂತರ ವಿಜಯ ಜ್ಯೋತಿ ರಥವು ಕೊಲ್ಹಾರ ಯು.ಕೆ.ಪಿ ಮಾರ್ಗವಾಗಿ ಬೀಳಗಿಗೆ ತೆರಳಿತು.

ಕೊಲ್ಹಾರ ತಹಸೀಲ್ದಾರ ಎಸ್.ಎಸ್ .ನಾಯಕಲ್ ಮಠರವರು ಬೀಳಗಿ ತಹಸೀಲ್ದಾರರಿಗೆ ರಥವನ್ನು ಬೀಳ್ಕೊಟ್ಟರು.

ಈ ವೇಳೆ ಉಪ ತಹಸೀಲ್ದಾರ ಎನ್. ಕೆ. ನದಾಫ್, ಆಹಾರ ನಿರೀಕ್ಷಕ ಎಮ್. ಎಸ್. ಗುತ್ತರಗಿ, ಮುಖಂಡರಾದ ಸಾಹೇಬಗೌಡ ಪಾಟೀಲ, ಚನ್ನಪ್ಪಗೌಡ ಬಿರಾದಾರ, ಶಂಕರಗೌಡ ಮೇಲಿನಮನಿ, ಮಲ್ಲು ದೇಸಾಯಿ, ಬಸವರಾಜ ಸಿದ್ದಾಪುರ, ಎಸ್.ಆರ್.ಪಾಟೀಲ, ಸಿ.ಎಸ್.ಬಿರಾದಾರ, ನಂದು ಕುಬಕಡ್ಡಿ, ಶ್ರೀಶೈಲ ನಾಗೋಡ, ಗುರು ವಿಜಾಪೂರ, ಮುದಕಪ್ಪ ಕೆಂಗನಾಳ, ಸಚಿನ್ ದನ್ಯಾಳ, ಶಿವಲಿಂಗ ಧೂಪದ, ರಮೇಶ ಉಳ್ಳಾಗಡ್ಡಿ, ಶ್ರೀಶೈಲಗೌಡ ಬಿರಾದಾರ, ಗುರುಲಿಂಗ ಬಿರಾದಾರ, ಬಸವರಾಜ ಹಾದಿಮನಿ, ಭೀಮನಗೌಡ ಮೇಲಿನಮನಿ, ಸಂಗನಗೌಡ ಪಾಟೀಲ, ಸಂತೋಷ ಗಣಾಚಾರಿ, ಸಂಗಮೇಶ ಬಿಜಾಪುರ, ಸಂಗಮೇಶ ಚಿಮ್ಮಲಗಿ, ಸಂತೋಷ ಚನಗೊಂಡ, ಜಗದೀಶ ಸಾಲಳ್ಳಿ, ಸಂಗಮೇಶ ಕುಬಕಡ್ಡಿ, ಗೌರೀಶ ಪಾಟೀಲ, ಶಂಕರ ದೇಸಾಯಿ, ಸಂಗಮೇಶ ಬಗಲಿ, ಯುವಕರಾದ ನಿಲೇಶ ಕುರುಹಿನಶೆಟ್ಟಿ, ಮಲ್ಲು ಬಿರಾದಾರ, ಬಸವರಾಜ ರೂಢಗಿ, ವಿನೋದ ದೇಸಾಯಿ ಬೀಳಗಿ, ಶಿವಶಂಕರ ದೇಸಾಯಿ, ನಿಂಗೊಂಡೆಪ್ಪ ರೂಢಗಿ, ದೇಸಾಯಿ ಬೀಳಗಿ ಸೇರಿದಂತೆ ತಹಸೀಲ್ದಾರ ಕಾರ್ಯಾಲಯದ ಸಿಬ್ಬಂದಿ ವರ್ಗದವರು ಹಾಗೂ ನಾಗರಿಕರು ಭಾಗವಹಿಸಿದ್ದರು.

# 'ಜಾನಪದ ಪ್ರಪಂಚ' ಪ್ರಶಸ್ತಿಗೆ ಅರ್ಜಿ ಅಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕನ್ನಡ ಜಾನಪದ ಪರಿಷತ್ ರಾಜ್ಯ ಘಟಕ ಕೊಡಮಾಡುವ ರಾಜ್ಯ ಮಟ್ಟದ "ಜಾನಪದ ಪ್ರಪಂಚ " ಪ್ರಶಸ್ತಿಗೆ ರಾಜ್ಯದ ಜನಪದ ಕಲಾವಿದರಿಂದ ಅರ್ಜಿ ಅಹ್ವಾನಿಸಲಾಗಿದೆ.

ಇದೆ ತಿಂಗಳು ಬೆಂಗಳೂರಿನಲ್ಲಿ ನಡೆಯುವ ಸಮಾರಂಭದಲ್ಲಿ ಜಿಲ್ಲೆಗೆ ಒಬ್ಬರನ್ನು ಆಯ್ಕೆಮಾಡಲಾಗುವುದು. 5000 ರೂ ನಗದು,ಪ್ರಶಸ್ತಿ ಪತ್ರ, ನೆನಪಿನ ಸ್ಮರಣಿಕೆಯೊಂದಿಗೆ ಗೌರವಿಸಲಾಗುವುದು.

ಜನಪದ ಮೂಲ ಕಲಾವಿದರು 55 ವರ್ಷ ತುಂಬಿರಬೇಕು. ತಮ್ಮ ಸೇವಾವದಿಯ ಫೋಟೊ, ಪ್ರಮಾಣಪತ್ರ, ಪತ್ರಿಕಾ ವರದಿ , ಶಿಫಾರಸ್ಸು ಪತ್ರ ಮತ್ತು ಆಧಾರ್ ಕಾರ್ಡ ಇತ್ಯಾದಿಗಳೊಂದಿಗೆ ದಿನಾಂಕ 20.10.2024 ರ ಒಳಗಾಗಿ ಜಿಲ್ಲಾಧ್ಯಕ್ಷರಿಗೆ ಈ ಕೆಳಗಿನ ವಿಳಾಸಕ್ಕೆ ತಲುಪಿಸಬೇಕು. ಅರ್ಜಿ ಕಳಿಸುವ ವಿಳಾಸ: ಜಿಲ್ಲಾಧ್ಯಕ್ಷರು, ಕನ್ನಡ ಜಾನಪದ ಪರಿಷತ್ ವಿಜಯಪುರ.

ರೇನಬೋ ಫೋಟೊ ಸ್ಟುಡಿಯೋ. ವಿಠ್ಠಲ ಮಂದಿರ ರಸ್ತೆ. ಕೆನರಾ ಬ್ಯಾಂಕ್ ಎದುರು. ಮಿಲನ ಬಾರ್ ಹಿಂದೆ, ವಿಜಯಪುರ ಇಲ್ಲಿಗೆ ಕಳಿಸಲು ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಎಸ್ ಪಾಟೀಲ (ಪಡಗಾನೂರ) ತಿಳಿಸಿದ್ದಾರೆ.

# ನೇಕಾರ ಸಮ್ಮಾನ್: ವಿದ್ಯುತ್ ಮಗ್ಗ ನೇಕಾರರಿಂದ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2024–25ನೇ ಸಾಲಿಗೆ ನೇಕಾರ ಸಮ್ಮಾನ್ ಯೋಜನೆಯಡಿ ವಿದ್ಯುತ್ ಮಗ್ಗ ನೇಕಾರರಿಗೆ ವಾರ್ಷಿಕ 5,000ರೂಗಳ ಆರ್ಥಿಕ ನೆರವನ್ನು ನೀಡುವ ಸಲುವಾಗಿ ವಿದ್ಯುತ್ ಮಗ್ಗ ಮತ್ತು ಮಗ್ಗಪೂರ್ವ ಘಟಕದ ಮಾಲೀಕರು ಹಾಗೂ ಸದರಿ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಕಾರ್ಯನಿರತ ವಿದ್ಯುತ್ ಮಗ್ಗ ನೇಕಾರರನ್ನು ಈಗಾಗಲೇ ಕಳೆದ ಸಾಲಿನಲ್ಲಿ ನೇಕಾರ ಸಮ್ಮಾನ್ (ವಿದ್ಯುತ್ ಮಗ್ಗ) ಯೋಜನೆಯಡಿ ಸೇವಾಸಿಂಧು ಪೋರ್ಟಲ್‌ನಲ್ಲಿ ನೋಂದಾಯಿಸಿದ ವಿದ್ಯುತ್ ಮಗ್ಗ ಮತ್ತು ಮಗ್ಗ ಪೂರ್ವ ಘಟಕಗಳಲ್ಲಿ ಕೆಲಸ ಮಾಡುತ್ತಿರುವ ನೇಕಾರರಿಮದ ಹೊಸದಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿಜಯಪುರ ಜಿಲ್ಲೆಯ ನೇಕಾರರು ನಿಗಧಿತ ಅರ್ಜಿ ನಮೂನೆಯೊಂದಿಗೆ ಘಟಕದ ಮಾಲೀಕರಿಂದ ಮುಚ್ಚಳಿಕೆ ಪತ್ರ, ಘಟಕದ ಮಾಲೀಕರ/ನೇಕಾರರ ಆಧಾರ್ ಲಿಂಕ್ ಬ್ಯಾಂಕ್ ಪಾಸ್‌ಬುಕ್ ಪ್ರತಿ, ವಿದ್ಯುತ್ ಮಗ್ಗ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಫಲಾನುಭವಿಯ ಫೋಟೋ, ವಿದ್ಯುತ್ ಸಂಪರ್ಕ ಹೊಂದಿರುವ ಆರ್.ಆರ್. ಸಂಖ್ಯೆಯ ಇತ್ತಿಚೀನ ವಿದ್ಯುತ್ ಬಿಲ್, ಘಟಕದ ಉದ್ಯೋಗ ಆಧಾರ್/ಪಿ.ಎಂ.ಟಿ ಉದ್ದಿಮೆದಾರರ ಪರವಾನಿಗೆ ಪತ್ರದ ಪ್ರತಿ, ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ನೇಕಾರರ ವಿವರಗಳನ್ನು ಒಳಗೊಂಡ ಮಜೂರಿಯ ಪಾವತಿಯ ಪ್ರತಿಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು 25–10–2024 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಕೈ ಮಗ್ಗ ಮತ್ತು ಜವಳಿ ಇಲಾಖೆ, ಕೈಗಾರಿಕೆ ಕೇಂಧ್ರ ಆವರಣ ಶಿಖಾರಖಾನ ವಿಜಯಪುರ ಅಥವಾ ಮೊಬೈಲ್ ಸಂಖ್ಯೆ 9902561441ನ್ನು ಸಂಪರ್ಕಿಸಬಹುದು ಎಂದು ಕೈ ಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರ ಪ್ರಕಟಣೆ ತಿಳಿಸಿದೆ.

## ಅರ್ಜಿಆಹ್ವಾನ

ವಿಜಯಪುರ: ನಗರ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ 33 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 186 ಅಂಗನವಾಡಿ ಸಹಾಯಕಿಯರ ಹುದ್ದೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಅರ್ಜಿ ಆಹ್ವಾನಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ನಗರ ಶಾಸಕ ಬಸನಗೌಡ ರಾ.ಪಾಟೀಲ ಯತ್ನಾಳ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ವಿವಿಧ ಕಾರಣಗಳಿಂದ ನಗರದ ವಿವಿಧೆಡೆ ಖಾಲಿ ಆಗಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನವೆಂಬರ್ 9 ಕೊನೆಯ ದಿನವಾಗಿದೆ. ಕಾರಣ ನ.9 ರೊಳಗಾಗಿ http:\\karnemakaone.kar.nic.in\abcd\ ಈ ವೆಬ್ ಸೈಟ್ ದಲ್ಲಿ ಆನ್ ಲೈನ್ ಮೂಲಕ ಅಗತ್ಯ ದಾಖಲೆಗಳನ್ನು ಅಪ್ಲೋಡ್ ಮಾಡಿ, ಅರ್ಜಿಸಿ, ಉದ್ಯೋಗ ಪಡೆದುಕೊಳ್ಳಬೇಕು. ಈ ವಿಷಯವನ್ನು ತಮ್ಮ ಸಂಬಂಧಿಕರು, ನೆರೆ–ಹೊರೆ ಯವರಿಗೆ ತಿಳಿಸುವ ಮೂಲಕ ಅನುಕೂಲ ಮಾಡಿಕೊಡಬೇಕು ಎಂದು ಹೇಳಿದ್ದಾರೆ.

# ಅ.17ರಂದು ಕಜಾಪ ಜಿಲ್ಲಾಧ್ಯಕ್ಷ ಬಾಳನಗೌಡರಿಗೆ ಬಸವ ಶ್ರೀರಕ್ಷೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಹಿಕ್ಕನಗುತ್ತಿ ಗ್ರಾಮದ ಲಿಂಗಾಯತ ಮಠದಲ್ಲಿ ಅ.17ರಂದು ನಡೆಯುವ ಹುಣ್ಣಿಮೆ 8ನೆಯ ಮಾಸಿಕ ಶರಣಾನುಭವ ಹಾಗೂ ಘನ ಶರಣ ಹರಳಯ್ಯ–ಮಧುರಸ ಶೀಲವಂತ ಶರಣರ ಹುತಾತ್ಮರಾದ ದಿನ ಕಲ್ಯಾಣ ಕ್ರಾಂತಿ ವಿಜಯೋತ್ಸವ ಕಾರ್ಯಕ್ರಮದಲ್ಲಿ ಶಿಕ್ಷಕ, ಸಾಹಿತಿ ಕನ್ನಡ ಜನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ ಪಡಗಾನೂರ ಅವರಿಗೆ ಬಸವ ಶ್ರೀರಕ್ಷೆ ನೀಡಿ ಗೌರವಿಸಿ ಸನ್ಮಾನಿಸಲಾಗುವುದು ಎಂದು ಶ್ರೀಮಠದ ಪ್ರಭುಲಿಂಗ ಶರಣರು ತಿಳಸಿದ್ದಾರೆ.

# ನೌಕರರ ಸಂಘದ ಚುನಾವಣೆ: ದೊಡಮನಿ ನಾಮಪತ್ರ ಸಲ್ಲಿಕೆ



■ ಉದಯರಶ್ಮಿ ದಿನಪತ್ರಿಕೆ

ಯಡ್ರಾಮಿ: 2024 ರಿಂದ 2029 ಅವಧಿಗೆ ನಡೆಯುವ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಚುನಾವಣೆ ಪ್ರಯುಕ್ತ ಯಡ್ರಾಮಿ ತಾಲೂಕು ಶಾಖೆ ಕಾರ್ಯಕಾರಿ ಸಮಿತಿ ನಿರ್ದೇಶಕ ಸ್ಥಾನಕ್ಕೆ ಕಣಮೇಶ್ವರ ಪ್ರೌಢ ಶಾಲೆಯ ಶಿಕ್ಷಕ ನಿಂಗಣ್ಣ ದೊಡಮನಿ ಬುಧವಾರ ಪಟ್ಟಣದ ನೌಕರರ ಸಂಘದ ತಾಲೂಕು ಕಛೇರಿಯಲ್ಲಿ ನಾಮಪತ್ರ ಸಲ್ಲಿಸಿದರು.

ಈ ವೇಳೆ ಶಿಕ್ಷಕರಾದ ಬಲವಂತ್ರಾಯ ಹಿರೇಗೌಡರ, ಪ್ರಭುಗೌಡ ದೇಸಾಯಿ, ಪ್ರಭು ಯಾಳಗಿ, ಉದಂಡಪ್ಪ ರತ್ನಾಕರ, ಸುಭಾಸ ಸಿಂಗ್ ರಜಪೂತ್, ಮಹೇಶ ಹಾವರೆಡ್ಡಿ, ಪ್ರವೀಣ ಬಿರಾದಾರ ಇದ್ದರು.

# ಎಂಎಲ್ಸಿ ಸಿ.ಟಿ.ರವಿ & ವಾಗ್ಮಿ ಸೂಲಿಬೆಲೆಗೆ ಜಾತ್ರಾ ಕಮೀಟಿಯಿಂದ ಸನ್ಮಾನ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣಕ್ಕೆ ಆಗಮಿಸಿದ ನಮೋ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ಬಿಜೆಪಿ ಕಾರ್ಯಕರ್ತರು ಹಾಗೂ ರಾವುತರಾಯ , ಮಲ್ಲಯ್ಯ ಜಾತ್ರಾ ಕಮೀಟಿ ಸದಸ್ಯರು ಸನ್ಮಾನಿಸಿ ಬೀಳ್ಕೊಟ್ಟರು.

ಪಟ್ಟಣದ ಮೂಲಕ ವಿಜಯಪುರಕ್ಕೆ ಪ್ರಯಾಣ ಬೆಳೆಸಿದ್ದ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ಮಂಗಳವಾರ ಬಿಜೆಪಿ ಕಾರ್ಯಕರ್ತರು ಮಲ್ಲಯ್ಯ ದೇವಸ್ಥಾನದ ಮುಂದೆ ಆತ್ಮೀಯವಾಗಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಸಿ.ಟಿ.ರವಿ ಮಲ್ಲಯ್ಯ ದೇವಸ್ಥಾನಕ್ಕೆ ತೆರಳಿ ರಾವುತರಾಯ, ಮಲ್ಲಯ್ಯನ ದರ್ಶನ ಪಡೆದರು. ನಂತರ ಜಾತ್ರಾ ಕಮೀಟಿಯಿಂದ ಸನ್ಮಾನ ಸ್ವೀಕರಿಸಿದರು.

ನಮೋ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ಸಹ ವಿಜಯಪುರಕ್ಕೆ ತೆರಳುವ ಸಂದರ್ಭದಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಯುವಜನತೆ ಇವರನ್ನು ಮಲ್ಲಯ್ಯ ದೇವಸ್ಥಾನದ ಮುಂದೆ ಸ್ವಾಗತಿಸಿ ಸನ್ಮಾನಿಸಿದರು.

ಪಟ್ಟಣ ಪಂಚಾಯಿತಿ ಉಪಾಧ್ಯಕ್ಷ ರಮೇಶ ಮಸಬಿನಾಳ, ತಾಲ್ಲೂಕು ಜಂಗಮಾಭಿವೃದ್ಧಿ ಸಂಘದ ಅಧ್ಯಕ್ಷ ಸೋಮಶೇಖರ ಹಿರೇಮಠ, ಬಸವಶರಣ ಸಂಗಮ ಸೇವಾ ಸಮಿತಿ ಅಧ್ಯಕ್ಷ ಸಂಗಪ್ಪಣ್ಣ ತಡವಲ್, ಜಾತ್ರಾ ಸಮಿತಿ ಅಧ್ಯಕ್ಷ ವಿನೋದ ಪಾಟೀಲ, ಉಪಾಧ್ಯಕ್ಷ ಶ್ರೀಧರ ನಾಡಗೌಡ, ಮಡಿವಾಳಪ್ಪಗೌಡ ಪಾಟೀಲ, ಸೋಮು ದೇವೂರ, ರಮೇಶ ಈಳಗೇರ, ಶಿವರಾಜ್ ತಳವಾರ, ಕಲ್ಮೇಶ ಬುದ್ನಿ, ಚಂದ್ರಶೇಖರ ದಾನಗೊಂಡ, ಮಹಾಂತೇಶ ಬಿರಾದಾರ ಇದ್ದರು.

# ಚನ್ನಮ್ಮ ವಿಜಯಜ್ಯೋತಿ ರಥಯಾತ್ರೆಗೆ ಸ್ವಾಗತ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಕಿತ್ತೂರು ರಾಣಿ ಚನ್ನ ಮ್ಮಳ 200ನೇ ವಿಜಯೋತ್ಸವದ ಅಂಗವಾಗಿ ರಾಜ್ಯದೆಲ್ಲೆಡೆ ಸಂಚರಿಸುತ್ತಿರುವ ವಿಜಯಜ್ಯೋತಿ ರಥ–'ಯಾತ್ರೆಯನ್ನು ಮಂಗಳವಾರ ರಾತ್ರಿ ತಾಲ್ಲೂಕು ಆಡಳಿತ ಹಾಗೂ ಸಮುದಾಯದ ಪ್ರಮುಖರು ಸ್ವಾಗತಿಸಿ, ಬಿಳ್ಕೊಟ್ಟರು.

ಪಟ್ಟಣದ ಮಲ್ಲಯ್ಯನ ದೇವಸ್ಥಾನದ ಮುಂಭಾಗದಲ್ಲಿ ರಾತ್ರಿ 11 ಗಂಟೆಗೆ ಆಗಮಿಸಿದ ವಿಜಯಜ್ಯೋತಿ ರಥಯಾತ್ರೆಗೆ ತಹಶೀಲ್ದಾರ ಪ್ರಕಾಶ ಸಿಂದಗಿ ಹಾಗೂ ತಾಲ್ಲೂಕು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಸಿ.ಕೆ.ಕುದರಿ ಅವರ ನೇತೃತ್ವದಲ್ಲಿ ಸ್ವಾಗತಿಸಿ, ರಾಣಿ ಚನ್ನಮ್ಮಳ ಪ್ರತಿಮೆಗೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಲಾಯಿತು.

ಗ್ರಾಮಾಡಳಿತಾಧಿಕಾರಿ ಅನೀಲ ರಾಠೋಡ, ಬಾಬುಗೌಡ ಪಾಟೀಲ(ಜಿಡ್ಡಿಮನಿ), ಶಂಕರಗೌಡ ಪಾಟೀಲ (ಯರನಾಳ), ಕೆ.ಜಿ.ಭಾವಿಮನಿ, ಪಂಚಾಕ್ಷರಿ ಮಿಂಚನಾಳ, ಗೊಲ್ಲಾಳ ಬಿರಾದಾರ(ಹಿಟ್ನಳ್ಳಿ), ವಿರೇಶ ಕುದರಿ, ಶಿವನಗೌಡ ಪಾಟೀಲ(ಯರನಾಳ), ರಾಮು ದೇಸಾಯಿ, ಅಪ್ಪುಗೌಡ ಪಾಟೀಲ, ಪವನ ಪಾಟೀಲ ಸಹಿತ ಇತರರು ಇದ್ದರು.

## ಅಂತಾರಾಷ್ಟ್ರೀಯ ಗ್ರಾಮೀಣ ಮಹಿಳೆಯರ ದಿನಾಚರಣೆಯಲ್ಲಿ ಮಹಿಳಾ ವಿವಿ ಕುಲಪತಿ ಪ್ರೊ.ಬಿ.ಕೆ.ತುಳಸಿಮಾಲ ಅಭಿಮತ

# ಆಹಾರ ಭದ್ರತೆ ಒದಗಿಸುವಲ್ಲಿ ಮಹಿಳೆಯರ ಕೊಡುಗೆ ಅಪಾರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಆಹಾರ ಸರಪಳಿಯಲ್ಲಿ ಮತ್ತು ಆಹಾರ ಭದ್ರತೆಯನ್ನು ಒದಗಿಸುವಲ್ಲಿ ಮಹಿಳೆಯರ ಕೊಡುಗೆ ಗಣನೀಯವಾಗಿದೆ. ಕೃಷಿ ಮಹಿಳಾ ಪ್ರಧಾನವಾಗಿದೆ. ಆದರೆ ಕೃಷಿಯ ಮೇಲಿನ ಅಧಿಕಾರ ಮಾತ್ರ ಪುರುಷರ ಪ್ರಾಬಲ್ಯದಲ್ಲಿದೆ. ಇದನ್ನು ಮೀರಿ ಮಹಿಳೆಯರು ಕೃಷಿ ಉದ್ಯಮಶೀಲತೆ ಬೆಳೆಸಿಕೊಳ್ಳಬೇಕು ಎಂದು ಮಹಿಳಾ ವಿವಿಯ ಕುಲಪತಿ ಪ್ರೊ.ಬಿ.ಕೆ.ತುಳಸಿಮಾಲ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಮಹಿಳಾ ಅಧ್ಯಯನ ಕೇಂದ್ರದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಅಂತಾರಾಷ್ಟ್ರೀಯ ಗ್ರಾಮೀಣ ಮಹಿಳೆಯರ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದ ಅವರು, ಮಹಿಳೆಯರು ಉದ್ಯಮಶೀಲತೆ ಬೆಳೆಸಿಕೊಳ್ಳಲು ಮತ್ತು ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕೆ ವಿಶ್ವವಿದ್ಯಾಲಯಗಳು ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಗ್ರಾಮೀಣ ಪ್ರದೇಶದ ಮಹಿಳೆಯರು ಕೃಷಿಯಲ್ಲಿ ಹೆಚ್ಚು ತೊಡಗಿದ್ದಾರೆ. ಪ್ರತಿ ಕೃಷಿ ಸಂಬಂಧಿ ಚಟುವಟಿಕೆಯ ಹಿಂದೆ ಮಹಿಳೆಯ ಕೊಡುಗೆ ಇದೆ. ಆದ್ದರಿಂದ ವಿಶ್ವಸಂಸ್ಥೆ ಗ್ರಾಮೀಣ ಮಹಿಳೆಯರ ದಿನಾಚರಣೆಯ ಅಂಗವಾಗಿ ಗ್ರಾಮೀಣ ಮಹಿಳೆಯರು ಎಲ್ಲರಿಗಾಗಿ ಉತ್ತಮ ಆಹಾರವನ್ನು ಬೆಳೆಯುತ್ತಿದ್ದಾರೆ ಎಂಬುದನ್ನು ಈ ವರ್ಷದ ಧ್ಯೇಯ ವಾಕ್ಯವನ್ನಾಗಿಸಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಉಮಾಶ್ರೀ ಶಂಕರ ಕೋಳಿ ಮಾತನಾಡಿ, ಸರ್ಕಾರ ಕಾರ್ಮಿಕರಿಗೆ ಹಲವು ಯೋಜನೆಗಳನ್ನು ರೂಪಿಸಿದ್ದು, ಅವುಗಳ ಪ್ರಯೋಜನ ಮಹಿಳೆಯರು ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ವಿವಿಯ ಕುಲಸಚಿವ ಶಂಕರಗೌಡ ಸೋಮನಾಳ ಮಾತನಾಡಿ, ಗ್ರಾಮೀಣ ಪ್ರದೇಶ ಮಹಿಳೆಯರ ಹತ್ತಿರ ನೇರವಾಗಿ ಕೃಷಿ ಮತ್ತು ಕೃಷಿಯೇತರ ಉತ್ಪನ್ನಗಳನ್ನು ಖರೀದಿಸುವ ಮೂಲಕ ಗ್ರಾಮೀಣ ಪ್ರದೇಶದ ಮಹಿಳೆಯರ ಸಬಲೀಕರಣಕ್ಕೆ ಪ್ರತಿಯೊಬ್ಬರು ಕೈಜೋಡಿಸಿ ಪ್ರೋತ್ಸಾಹಿಸಬೇಕು ಎಂದರು.

ಗ್ರಾಮೀಣ ಪ್ರದೇಶದ ಮಹಿಳಾ ಸಾಧಕಿಯರಾದ ಸುನಂದಾ ಪಾಟೀಲ, ಸುಮನ ಕೋಲ್ಹಾರ, ಮಂಗಲಾ ಗುಡಿಮಠ, ಚಂದ್ರವ್ವ ಬಬಲೇಶ್ವರ, ಯಲ್ಲವ್ವಾ ಸಾಲಗಲ್ಲ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ವಿವಿಯ ಮೌಲ್ಯಮಾಪನ ಕುಲಸಚಿವ ಪ್ರೊ.ಎಚ್. ಎಂ.ಚಂದ್ರಶೇಖರ, ಪ್ರೊ.ಜಿ.ಬಿ.ಸೋನಾರ, ಡಾ.ಸೋನಕಾಂಬಳೆ, ಡಾ.ಕಲಾವತಿ ಕಾಂಬಳೆ ಉಪಸ್ಥಿತರಿದ್ದರು.

ಮಹಿಳಾ ಅಧ್ಯಯನ ಕೇಂದ್ರದ ನಿರ್ದೇಶಕಿ ಪ್ರೊ.ಲಕ್ಷ್ಮಿದೇವಿ ವಾಯ್ ಪ್ರಾಸ್ತಾವಿಕ ನುಡಿಗಳನ್ನಾಡಿ ಸ್ವಾಗತಿಸಿದರು. ಡಾ.ಸರೋಜಾ ಸಂತಿ ಅತಿಥಿಗಳನ್ನು ಮತ್ತು ಸಾಧಕಿಯರನ್ನುಪರಿಚಯಿಸಿದರು. ಡಾ.ರಜಿಯಾಬೇಗಂ ನದಾಫ ನಿರೂಪಿಸಿದರು. ರುಕ್ಮವ್ವಾ ಅಗಸರ ವಂದಿಸಿದರು.

**Printed by:** AVINASH BIDARI, **Published and OWNED by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR